ಸಂಪುಟ : 9 ಸಂಚಿಕೆ 189 ಪುಟ : 4 ಬೆಲೆ: 3.00 ಬುಧವಾರ ಸೆಪ್ಟೆಂಬರ್ 4 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 9 Issue : 189 Pages : 4 Price : 3.00 Wednesday september 4 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

ಭಾರತೀಯ ವೈದ್ಯಕೀಯ ಸಂಘಕ್ಕೆ ಉಪಾಧ್ಯಕ್ಷರಾಗಿ ಡಾ. ಬಿಡಿನಹಾಳ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಖ್ಯಾತ ವೈದ್ಯರಾದ ಡಾ. ಜಿ.ಬಿ. ಬಿಡಿನಹಾಳ ಅವರನ್ನು ದೇಶದ ಪ್ರತಿಷ್ಠಿತ ಭಾರತೀಯ ವೈದ್ಯಕೀಯ ಸಂಘ, ದೆಹಲಿಯ ರಾಷ್ಟ್ರೀಯ ಉಪಾಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಗಿದೆ ಎಂದು ಅಹಮದಾಬಾದ್‌ನ ಸಂಘದ ಮುಖ್ಯ ಚುನಾವಣಾ ಆಯುಕ್ತರಾದ ಡಾ.ಮಹೇಶ ಪಾಟೀಲ್ ತಿಳಿಸಿದ್ದಾರೆ.

ವೈದ್ಯಕೀಯ ಕ್ಷೇತ್ರದಲ್ಲಿ ಡಾ. ಬಿಡಿನಹಾಳ ಅವರ ಅನುಪಮ ಸೇವೆಯನ್ನು ಮನಗಂಡು ಅವರಿಗೆ ಈ ಸ್ಥಾನ ನೀಡಲಾಗಿದ್ದು, ವೈದ್ಯಕೀಯ ಮಾತ್ರವಲ್ಲದೇ ಕೃಷಿ, ಕ್ರೀಡಾ ಕ್ಷೇತ್ರದಲ್ಲೂ ಸಾಧನೆ ಮಾಡುವ ಮೂಲಕ ನಮ್ಮ ಜಿಲ್ಲೆಗೆ ಮಾದರಿ ವ್ಯಕ್ತಿಯಾಗಿ ಕೀರ್ತಿ ತಂದಿದ್ದಾರೆ. ಡಾ. ಜಿ.ಬಿ ಬಿಡಿನಹಾಳ ಅವರು ಈಗಾಗಲೇ ಐ.ಎಂ.ಎ ಅಧ್ಯಕ್ಷರಾಗಿ, ರಾಷ್ಟ್ರೀಯ ಕಾರ್ಯಕಾರಿ ಸಮಿತಿಯ ಸದಸ್ಯರಾಗಿ, ಕರ್ನಾಟಕ ರಾಜ್ಯ ಶಾಖೆಯ ಕ್ರೀಡಾ ಅಧ್ಯಕ್ಷರಾಗಿ ಹಾಗೂ ರಾಷ್ಟ್ರೀಯ ಕ್ರೀಡಾ ಸ್ಥಾಯಿ ಸಮಿತಿಯ ಸದಸ್ಯರಾಗಿ ಸೇವೆ ಸಲ್ಲಿಸಿದ್ದಾರೆ.

ಭಾರತೀಯ ವೈದ್ಯಕೀಯ ಸಂಘದ ವತಿಯಿಂದ ಹೈದರಾಬಾದ್‌ನಲ್ಲಿ ಜರುಗುವ ವಾರ್ಷಿಕ ವೈದ್ಯಕೀಯ ಸಮ್ಮೇಳನದಲ್ಲಿ ಅಧಿಕಾರ ಸ್ವೀಕಾರ ನಡೆಯಲಿದೆ. ಗದಗ ಇತಿಹಾಸದಲ್ಲೇ ಮೊದಲ ಬಾರಿಗೆ ಭಾರತೀಯ ವೈದ್ಯಕೀಯ ಸಂಘಕ್ಕೆ ಉಪಾಧ್ಯಕ್ಷರಾಗಿ ಆಯ್ಕೆಯಾಗಿರುವ ಡಾ. ಜಿ.ಬಿ ಬಿಡಿನಹಾಳ ಅವರ ಸಾಧನೆ ಸಾರ್ಥಕವಾಗಿದೆ.

ಡಾ. ಬಿಡಿನಹಾಳ ಅವರನ್ನು ಕರ್ನಾಟಕ ರಾಜ್ಯ ಐ.ಎಂ.ಎ ಅಧ್ಯಕ್ಷರಾದ ಡಾ. ಎಸ್.ಶ್ರೀನಿವಾಸ, ಕಾರ್ಯದರ್ಶಿ ಬಿ.ಪಿ. ಕರುಣಾಕರ, ಗದಗ ಐ.ಎಂ.ಎ ಅಧ್ಯಕ್ಷರಾದ ಡಾ. ಪಲ್ಲೇದ ಮತ್ತು ಪದಾಧಿಕಾರಿಗಳು, ಸರ್ವ ಸದಸ್ಯರು ಹಾಗೂ ಕಲಾಚೇತನ ಆಕಾಡಮಿಯ ಡಾ. ಕಾವೆಂಶ್ರೀ ಅಭಿನಂದಿಸಿದ್ದಾರೆ.

ಪತ್ರಿಕಾ ವಿತರಕರ ದಿನಾಚರಣೆ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಬೆಟಗೇರಿ ಟೆಂಗಿನಕಾಯಿ ಬಜಾರ್ ಸಮೀಪದ ಶ್ರೀ ವೀರಭದ್ರೇಶ್ವರ ಸಮುದಾಯ ಭವನದಲ್ಲಿ ಅಖಿಲ ಕರ್ನಾಟಕ ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿ ಸಂಘದ ಜಿಲ್ಲಾ ಘಟಕದ ವತಿಯಿಂದ ವಿಶ್ವ ಪತ್ರಿಕಾ ವಿತರಕರ ದಿನಾಚರಣೆಯ 13ನೇ ವಾರ್ಷಿಕೋತ್ಸವ ಕಾರ್ಯಕ್ರಮ ಸೆ. 4ರಂದು ಬೆಳಿಗ್ಗೆ 11ಕ್ಕೆ ಜರುಗಲಿದೆ.

ಸದ್ಗುರು ಮುಕ್ತಣ್ಣೇಶ್ವರ ಮಠದ ಶಂಕರಾನಂದ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ ಉದ್ಘಾಟಿಸುವರು. ಸಂಘದ ಜಿಲ್ಲಾಧ್ಯಕ್ಷ ವೀರಬಸಯ್ಯ ವಿರಕ್ತಮಠ ಅಧ್ಯಕ್ಷತೆ ವಹಿಸುವರು.

ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತ ಮಹೇಶ ಪೋತದಾರ, ಜಿಲ್ಲಾ ಕಾರ್ಮಿಕ ಅಧಿಕಾರಿ ಶ್ರೀಶೈಲ ಸೋಮನಕಟ್ಟಿ, ಜಿಲ್ಲಾ ವಾರ್ತಾಧಿಕಾರಿ ವಸಂತ ಮಡ್ಲೂರ, ಸಮುದಾಯ ವ್ಯವಹಾರಿಕ ಅಧಿಕಾರಿ ಎಸ್.ವೈ. ಸಂಕನಗೌಡ್ರ, ಕಾರ್ಯನಿರತ ದಿನಪತ್ರಿಕೆ ಸಂಪಾದಕರ ಸಂಘದ ಉಪಾಧ್ಯಕ್ಷ ಮಂಜುನಾಥ ಅಬ್ಬಿಗೇರಿ, ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ರಾಜು ಹೆಬ್ಬಳ್ಳಿ ಸೇರಿ ಅನೇಕ ಮುಖಂಡರು ಪಾಲ್ಗೊಳ್ಳುವರು ಎಂದು ಸಂಘದ ಹಿರಿಯ ಸಲಹೆಗಾರ ಕೆ.ಎಸ್. ಹಿರೇಮಠ ತಿಳಿಸಿದ್ದಾರೆ.

ರಾಷ್ಟ್ರೀಯ, ರಾಜ್ಯ ಹೆದ್ದಾರಿಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಸಂಸದ ಬಸವರಾಜ ಬೊಮ್ಮಾಯಿ

ರೈತರಿಗೆ ಅನವಶ್ಯಕ ತೊಂದರೆಯಾಗದಿರಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿ ನಿರ್ಮಾಣದಲ್ಲಿ ಎಲ್ಲರ ಸಹಕಾರ ಅತ್ಯವಶ್ಯಕ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದರಾದ ಬಸವರಾಜ ಬೊಮ್ಮಾಯಿ ಹೇಳಿದರು.

ಗದಗ ನಗರದ ಜಿಲ್ಲಾಡಳಿತ ಭವನದ ಕೋರ್ಟ್ ಹಾಲ್‌ನಲ್ಲಿ ಮಂಗಳವಾರ ಏರ್ಪಡಿಸಿದ್ದ ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಭಾರತ ಸರ್ಕಾರದ ರೈಲ್ವೇ ಹಾಗೂ ರಾಷ್ಟ್ರೀಯ ಹೆದ್ದಾರಿಗಳಿಗೆ ರಾಜ್ಯ ಸರ್ಕಾರವು ಭೂಮಿಯನ್ನು ಒದಗಿಸಿಕೊಡಬೇಕು. ಹಾಗಾಗಿ ಯಾವುದೇ ರಾಷ್ಟ್ರೀಯ ಹೆದ್ದಾರಿ ಡಿಪಿಆರ್ ಅಂತಿಮಗೊಳ್ಳವ ಮೊದಲು ಸಂಬಂಧಿಸಿದ ಅಭಿಯಂತರರು ಸ್ಥಳೀಯ ಜಿಲ್ಲಾಡಳಿತ ಮತ್ತು ಜಿಲ್ಲಾ ಪೊಲೀಸ್ ಅವರಿಗೆ ನಿರಂತರವಾಗಿ ವರದಿ ಸಲ್ಲಿಸಿ ಅವರ ಅಭಿಪ್ರಾಯಗಳನ್ನು ಸಂಗ್ರಹಿಸಿ, ಆದಷ್ಟು ಕೃಷಿ ಮಾಡದ ಅಥವಾ ಖರಾಬು ಭೂಮಿಯನ್ನು ಗುರುತಿಸಿ, ರೈತರಿಗೆ ಮತ್ತು ಕೃಷಿ ಚಟುವಟಿಕೆಗಳಿಗೆ ಯಾವುದೇ ರೀತಿಯ ತೊಂದರೆ ಆಗದಂತೆ ವರದಿ ತಯಾರಿಸಬೇಕು ಎಂದು ಸೂಚಿಸಿದರು.

ಹೆದ್ದಾರಿಗಳಿಗೆ ಮಂಜೂರಾದ ಅನುದಾನವು ಇಲಾಖೆಗಳ ನಡುವಿನ ಅಸಹಕಾರದಿಂದ ಮರಳಿ ಹೋದರೆ ಈ ಪ್ರದೇಶದ ಅಭಿವೃದ್ಧಿಗೆ ಮಾರಕ ಆಗುತ್ತದೆ. ಹಾಗಾಗಿ ಎಲ್ಲರ ನಡುವೆ

ಸಹಕಾರ ಅತ್ಯವಶ್ಯಕ. ಯಾವುದೇ ಕಾರಣಗಳಿಗೆ ಆಸ್ಪದ ನೀಡದೆ ಎಲ್ಲಾ ಅಧಿಕಾರಿಗಳು ಪರಸ್ಪರ ಸಹಕಾರ-ಸಮನ್ವಯದಿಂದ ಅಭಿವೃದ್ಧಿ ಕೆಲಸಗಳತ್ತ ಕಾರ್ಯೋನ್ಮುಖವಾಗಬೇಕು ಎಂದರು.

ಸಂಸದರಾಗಿ ಕ್ಷೇತ್ರದ ಅಭಿವೃದ್ಧಿ ಕಾರ್ಯಗಳ ಕುರಿತು, ಎಲ್ಲಾ ವಿಷಯಗಳ ಬಗ್ಗೆ ಗಂಭೀರವಾಗಿದ್ದೇನೆ. ಹಾಗೇ ಎಲ್ಲಾ ಅಧಿಕಾರಿಗಳು ನಿರ್ಲಕ್ಷ್ಯ ತೋರದೆ ಗಂಭೀರವಾಗಿ ಕೆಲಸ ನಿರ್ವಹಿಸಿ ಎಂದು ಹೇಳಿದರು.

ರಸ್ತೆಗಳು ಸುಸ್ಥಿತಿಯಿಂದ ಇರಲು ನದಿ ಭಾಗದಲ್ಲಿ ನಡೆಯುವ ಅಕ್ರಮ ಗಣಿಗಾರಿಕೆಗಳಿಗೆ ತಡೆ ಬೀಳಬೇಕು. ಇಲ್ಲದಿದ್ದರೆ ಓವರ್ ಲೋಡ್ ವಾಹನಗಳ ಸಾಗಾಟದಿಂದ ರಸ್ತೆಗಳು ಹದೆಗೆಡುತ್ತವೆ. ನಿಯಮ ಬಾಹಿರವಾಗಿ ಅಕ್ರಮವಾಗಿ ಗಣಿಗಾರಿಕೆ ನಡೆಯದಂತೆ ಕ್ರಮವಹಿಸಬೇಕು ಎಂದು ಸಂಸದ ಬಸವರಾಜ ಬೊಮ್ಮಯಿ ಅವರು ಅಧಿಕಾರಿಗಳಿಗೆ ಹೇಳಿದರು.

ಗದಗ ಜಿಲ್ಲೆಗೆ ಕೇಂದ್ರೀಯ ವಿದ್ಯಾಲಯ ಮಂಜೂರಾಗಿದ್ದು, ಅದರಿಂದ ನೂರಾರು ವಿದ್ಯಾರ್ಥಿಗಳಿಗೆ ಪ್ರಯೋಜನವಾಗಲಿದೆ. ಹಾಗಾಗಿ ವಿದ್ಯಾಲಯಕ್ಕೆ ನಿಯೋಜಿಸಿದ ಜಾಗದ ಕುರಿತು ಚರ್ಚಿಸಿದರು.

ಸಭೆಯಲ್ಲಿ ಜಿಲ್ಲೆಯ ಪ್ರಮುಖ ರಸ್ತೆ, ಬೈಪಾಸ್ ನಿರ್ಮಾಣ ಕಾಮಗಾರಿ ಅನುಷ್ಠಾನಕ್ಕೆ

> ಕೇಂದ್ರೀಯ ವಿದ್ಯಾಲಯಕ್ಕೆ ಬೇಕಾದ ಜಾಗವನ್ನು ಈಗಾಗಲೇ ಕಾಯ್ದಿರಿಸಿದ್ದು, ಮುಂದಿನ ಶೈಕ್ಷಣಿಕ ವರ್ಷಕ್ಕೆ ಕೇಂದ್ರೀಯ ವಿದ್ಯಾಲಯವನ್ನು ಪ್ರಾರಂಭಿಸಲು ತಾತ್ಕಾಲಿಕ ಕಟ್ಟಡವನ್ನು ಗುರುತಿಸಿ ಕ್ರಮ ತೆಗೆದುಕೊಲಾಗುವುದು ಎಂದು ಜಿಲ್ಲಾಧಿಕಾರಿ ಗೋವಿಂದ ರೆಡ್ಡಿ ಹೇಳಿದರು.

ಇರುವ ತಾಂತ್ರಿಕ ಸಮಸ್ಯೆಗಳ ಪರಿಹಾರ ಕುರಿತು ವಿಸ್ತೃತವಾಗಿ ಚರ್ಚಿಸಿ, ಪರಿಹಾರ ಕಂಡುಕೊಳ್ಳಲಾಯಿತು. ಸಭೆಯಲ್ಲಿ ಜಿ.ಪಂ ಸಿಇಓ ಭರತ್ ಎಸ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಮುದುಕಮ್ಮನವರ, ಲೋಕೋಪಯೋಗಿ ಇಲಾಖೆ ಕಾರ್ಯಪಾಲಕ ಅಭಿಯಂತರ ರಮೇಶ ಪಾಟೀಲ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

ಹುಲಿಕೇರಿ ಇಂದ್ರಮ್ಮ ಕೆರೆಗೆ ಬಾಗಿನ ಅರ್ಪಿಸಿದ ಸಚಿವ ಭೋಸರಾಜು

ಕೆರೆ ದುರಸ್ತಿ ಕಾಮಗಾರಿ ಶೀಘ್ರವೇ ಪೂರ್ಣಗೊಳಿಸಿ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಅಳ್ನಾವರ ತಾಲೂಕಿನ ಐತಿಹಾಸಿಕ ಹುಲಿಕೇರಿ ಇಂದ್ರಮ್ಮ ಕೆರೆಗೆ ಭೇಟಿ ನೀಡಿ, ಬಾಗಿನ ಅರ್ಪಿಸಿದ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್. ಭೋಸರಾಜು ಅವರು ಕೆರೆ ದುರಸ್ತಿ ಕಾಮಗಾರಿಯನ್ನು ಯುದ್ಧೋಪಾದಿಯಲ್ಲಿ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ತಿಳಿಸಿದರು.

ಮಂಗಳವಾರ ಧಾರವಾಡ ಜಿಲ್ಲೆಯ ಅಳ್ನಾವರ ತಾಲೂಕಿನ ಹುಲಿಕೇರಿ ಗ್ರಾಮದ ಇಂದ್ರಮ್ಮ ಸಣ್ಣ ನೀರಾವರಿ ಕೆರೆ ಪುನರುಜ್ಜೀವನ ಕಾಮಗಾರಿಯ ಪರಿಶೀಲನೆ ನಡೆಸಿ, ಅಧಿಕಾರಿಗಳಿಂದ ಹಾಗೂ ಗ್ರಾಮಸ್ಥರಿಂದ ಮಾಹಿತಿ ಪಡೆದುಕೊಂಡರು.

ಇಂದ್ರಮ್ಮ ಕೆರೆಯ ಕಾಮಗಾರಿಯನ್ನು ಪೂರ್ಣಗೊಳಿಸಲು ನಾಲ್ಕು ಬಾರಿ ಟೆಂಡರ್ ಕರೆಯಲಾಗಿದೆ. ಟೆಂಡರ್ ಪ್ರಕ್ರಿಯೆ ಮುಗಿಸಿದ್ದ

ಗುತ್ತಿಗೆದಾರ ಕಾಮಗಾರಿಯನ್ನು ಪ್ರಾರಂಭಿಸಿರಲಿಲ್ಲ. ಈ ಹಿನ್ನೆಲೆಯಲ್ಲಿ ಟೆಂಡರ್ ರದ್ದುಗೊಳಿಸಿ ಹೊಸ ಟೆಂಡರ್ ಪ್ರಕ್ರಿಯೆ ಪ್ರಾರಂಭಿಸಲಾಗಿದೆ. ಈ ಬಾರಿ ಈ ಪ್ರಕ್ರಿಯೆಯಲ್ಲಿ ಯಾವುದೇ ಸಮಸ್ಯೆಗಳು ಆಗದಂತೆ ಕ್ರಮಗಳನ್ನ ಕೈಗೊಳ್ಳಬೇಕು. ಕ್ಷಿಪ್ರಗತಿಯಲ್ಲಿ ಟೆಂಡರ್ ಪ್ರಕ್ರಿಯೆ ಪೂರ್ಣಗೊಳಿಸಬೇಕು. ಕೆರೆಯ 2 ನಾಲೆಗಳ ಕಾಮಗಾರಿಯನ್ನು ಪ್ರಾರಂಭಿಸಬೇಕು ಎಂದು ಸೂಚನೆ ನೀಡಿದರು.

2020ರಲ್ಲಿ 940 ಕೋಟಿ ರೂ ಕಾಮಗಾರಿಗಳಿಗೆ ಟೆಂಡರ್ ಪ್ರಕ್ರಿಯೆಯಲ್ಲಿ ಭಾಗವಹಿಸಿದ್ದ ಗುತ್ತಿಗೆದಾರ ಕಾಮಗಾರಿಯನ್ನು ಪ್ರಾರಂಭಿಸದೇ ಅನಗತ್ಯ ವಿಳಂಬ ಮಾಡಿದ್ದ ಬಗ್ಗೆ ಅಧಿಕಾರಿಗಳು ಹಾಗೂ ಗ್ರಾಮಸ್ಥರಿಂದ ಮಾಹಿತಿ ಪಡೆದ ಸಚಿವರು ಅಧಿಕಾರಿಗಳನ್ನು ತರಾಟೆಗೆ ತಗೆದುಕೊಂಡರು. ಆ ಗುತ್ತಿಗೆದಾರ ಈ ಬಾರಿಯ ಟೆಂಡರ್ ಪ್ರಕ್ರಿಯೆಯಲ್ಲೂ ಪಾಲ್ಗೊಂಡಿರುವುದನ್ನು ತಿಳಿದ ಸಚಿವರು ಅಂತಹ ಗುತ್ತಿಗೆದಾರರನ್ನು ಕಪ್ಪುಪಟ್ಟಿಗೆ ಸೇರಿಸುವಂತೆ ಸೂಚಿಸಿದರು.

ಧಾರವಾಡ ಜಿಲ್ಲಾಧಿಕಾರಿಗಳಾದ ದಿವ್ಯಪ್ರಭು, ಸಣ್ಣ ನೀರಾವರಿ ಹಾಗೂ ಅಂತರ್ಜಲ ಇಲಾಖೆ ಕಾರ್ಯದರ್ಶಿಗಳಾದ ರಾಘವನ್ ಸೇರಿದಂತೆ ಅಧಿಕಾರಿಗಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

ಬಂಡಾಯದ ಲಾಭ ಪಡೆದ ಕಾಂಗ್ರೆಸ್ ಗೆಲುವಿನ ನಗೆ

ತಲೆಕೆಳಗಾದ ಲೆಕ್ಕಾಚಾರ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಪಟ್ಟಣದ ಪುರಸಭೆ ಅಧ್ಯಕ್ಷ, ಉಪಾಧ್ಯಕ್ಷ ಚುನಾವಣೆಯ ಹಿನ್ನೆಲೆಯಲ್ಲಿ ಬಿಜೆಪಿ ಬಂಡಾಯ ಅಭ್ಯರ್ಥಿ ಸುಭಾಸ ಮ್ಯಾಗೇರಿ ಅಧ್ಯಕ್ಷರಾಗಿ, ಕಾಂಗ್ರೆಸ್‌ನ ಸವಿತಾ ಬಿದರಳ್ಳಿ ಉಪಾಧ್ಯಕ್ಷೆಯಾಗಿ ಆಯ್ಕೆಯಾಗಿದ್ದಾರೆ.

ಚುನಾವಣೆಯ ಹಿನ್ನೆಲೆಯಲ್ಲಿ ಬೆಳಿಗ್ಗೆಯಿಂದಲೇ ಬಿಗುವಿನ ವಾತಾವರಣ ಸೃಷ್ಟಿಯಾಗಿತ್ತು. ಬಿಜೆಪಿ ಮತ್ತು ಕಾಂಗ್ರೆಸ್ ಪಕ್ಷದ ಮುಖಂಡರು ಚುನಾವಣೆ ರಣತಂತ್ರ ಹೆಣೆಯುವಲ್ಲಿ ಮುಂದಾಗಿದ್ದರು. ಪುರಸಭೆ ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನಕ್ಕೆ ಮಂಗಳವಾರ ನಡೆದ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಬಿಜೆಪಿ ಬಂಡಾಯ ಸದಸ್ಯ ಸುಭಾಸ ಮ್ಯಾಗೇರಿ ಹಾಗೂ ಯಮನಪ್ಪ ತಿರಕೋಜಿ ಮತ್ತು ಉಪಾಧ್ಯಕ್ಷ ಸ್ಥಾನಕ್ಕೆ



ಸವಿತಾ ಬಿದರಳ್ಳಿ, ಸುಜಾತಾಬಾಯಿ ಶಿಂಗ್ರಿ ಚುನಾವಣಾಧಿಕಾರಿ ನಾಮಪತ್ರ ಸಲ್ಲಿಸಿದ್ದರಿಂದ ಚುನಾವಣಾ ಫಲಿತಾಂಶ ಕುತೂಹಲಕ್ಕೆ ಕಾರಣವಾಗಿತ್ತು.

ಪುರಸಭೆ ಅಧ್ಯಕ್ಷ ಉಪಾಧ್ಯಕ್ಷ ಸ್ಥಾನಕ್ಕೆ ಸಲ್ಲಿಸಿದ್ದ ಅಭ್ಯರ್ಥಿಗಳಲ್ಲಿ ಯಾರೊಬ್ಬರೂ ನಾಮಪತ್ರ ಹಿಂಪಡೆಯದ್ದರಿಂದ ಮಧ್ಯಾಹ್ನ 2.30ಕ್ಕೆ ನಡೆದ ಚುನಾವಣೆಯಲ್ಲಿ ಪುರಸಭೆ ಅಧ್ಯಕ್ಷರಾಗಿ ಬಿಜೆಪಿ ಬಂಡಾಯ ಅಭ್ಯರ್ಥಿ ಸುಭಾಸ ಮ್ಯಾಗೇರಿ-13 ಮತಗಳು, ಉಪಾಧ್ಯಕ್ಷರಾಗಿ ಸವಿತಾ ಬಿದರಳ್ಳಿ-13 ಮತಗಳನ್ನು ಪಡೆದರು. ಪ್ರತಿಸ್ಪರ್ಧಿಗಳಾದ ಯಮನಪ್ಪ ತಿರ-ಕೋಜಿ ಹಾಗೂ ಸುಜಾತಾಬಾಯಿ ಶಿಂಗ್ರಿ ತಲಾ 11 ಮತಗಳನ್ನು ಪಡೆದರು. ಬಂಡಾಯದಿಂದ ಪುರಸಭೆ ಅಧಿಕಾರ ಕಾಂಗ್ರೆಸ್ ಪಾಲಾಯಿತು.

ಪುರಸಭೆ ಅಧ್ಯಕ್ಷ, ಉಪಾಧ್ಯಕ್ಷ ಚುನಾವಣೆಯಲ್ಲಿ ಸಿದ್ದಪ್ಪ ಬಂಡಿ ತಂತ್ರಗಾರಿಕೆ ಹಾಗೂ ಮರ್ತುಜಾ ಡಾಲಾಯತ್ ತಂಡದ ಸಮಯಪ್ರಜ್ಞೆಯಿಂದ ಪುರಸಭೆ ಆಡಳಿತ ಕಾಂಗ್ರೆಸ್ ಪಾಲಾಗಿದ್ದು, ಕಾಂಗ್ರೆಸ್ ಮುಖಂಡರು ಗೆಲುವಿನ ನಗೆ ಬೀರಿದರು.

> ಪಟ್ಟಣದ ಪುರಸಭೆಯಲ್ಲಿ ಬಹುಮತ ಹೊಂದಿದ ಪರಿಣಾಮ ಬಿಜೆಪಿ ಸಹಜವಾಗಿ ಪುರಸಭೆ ಅಧಿಕಾರ ಹಿಡಿಯುವ ವಿಶ್ವಾಸದಲ್ಲಿದ್ದರಿಂದ ರಾಜಕೀಯ ಕ್ಷಿಪ್ರ ಬೆಳವಣಿಗೆಯಿಂದ ಈ ಲೆಕ್ಕಾಚಾರ ಸಂಪೂರ್ಣ ವಿಫಲವಾಯಿತು. ಬಿಜೆಪಿ ಸದಸ್ಯರಿಗೆ ಸಭೆ ಮಾಡಿ ವಿಪ್ ಜಾರಿ ಮಾಡಿ ಮಂಗಳವಾರ ಬೆಳಿಗ್ಗೆ 9.30ಕ್ಕೆ ಬಿಜೆಪಿ ಕಾರ್ಯಾಲಯಕ್ಕೆ ಬರುವಂತೆ ಸೂಚಿಸಿತ್ತು. ಆದರೆ ಬಿಜೆಪಿ ಹೈಕಮಾಂಡ್ ಕರೆದಿದ್ದ 18 ಸದಸ್ಯರಲ್ಲಿ 7 ಸದಸ್ಯರು 10.30 ಆದರೂ ಸಭೆಗೆ ಬಾರದಿದ್ದಾಗ, ಬಿಜೆಪಿ ಮುಖಂಡರು ಬಂಡಾಯ ಸದಸ್ಯರನ್ನು ಸಂಪರ್ಕಿಸುವ ಪ್ರಯತ್ನ ನಡೆಸಿದರೂ ಪ್ರಯೋಜನವಾಗಲಿಲ್ಲ.

'ಶ್ರಾವಣ ಸಂಜೆ' ಕಾರ್ಯಕ್ರಮದ ಸಮಾರೋಪ ಸಮಾರಂಭದಲ್ಲಿ ಮುಕ್ತಿಮಂದಿರ ಶ್ರೀಗಳು

ಹಿರಿಯರು ನಡೆದ ದಾರಿಯಲ್ಲಿ ಸಾಗಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪ್ರಸ್ತುತ ಟಿವಿ, ಮೊಬೈಲ್‌ಗಳ ಪ್ರಭಾವ ಮತ್ತು ಒತ್ತಡದ ಬದುಕಿನಲ್ಲಿರುವ ಜನರಿಗೆ ಧರ್ಮ, ಸಂಸ್ಕೃತಿ, ಆಚರಣೆ, ಸಂಪ್ರದಾಯ, ಸಾಹಿತ್ಯ, ಆಧ್ಯಾತ್ಮದ ಸಂಗ ಕಲ್ಪಿಸುವ ಮೂಲಕ ಸಾತ್ವಿಕ ಸಮಾಜ ನಿರ್ಮಾಣ ಮಾಡುವ ಪುರಾಣ-ಪುಣ್ಯಕಥೆಗಳನ್ನು ಕೇಳಿ ಬದುಕಿನಲ್ಲಿ ಅಳವಡಿಸಿಕೊಳ್ಳುವ ಜವಾಬ್ದಾರಿ ಪ್ರತಿಯೊಬ್ಬರದ್ದಾಗಿದೆ ಎಂದು ಮುಕ್ತಿಮಂದಿರ ಧರ್ಮಕ್ಷೇತ್ರದ ಪಟ್ಟಾಧ್ಯಕ್ಷರಾದ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು ಹೇಳಿದರು.

ಅವರು ಮಂಗಳವಾರ ಪಟ್ಟಣದ



ಅಕ್ಕಮಹಾದೇವಿ ದೇವಸ್ಥಾನದಲ್ಲಿ ಶ್ರಾವಣ ಮಾಸದುದ್ದಕ್ಕೂ ಶ್ರೀ ಸಿದ್ದೇಶ್ವರ ಸತ್ಸಂಗ ಬಳಗ, ಕದಳಿ ಮಹಿಳಾ ವೇದಿಕೆ, ಶರಣ ಸಾಹಿತ್ಯ ಪರಿಷತ್ತು, ರಾಜರಾಜೇಶ್ವರಿ ಮಹಿಳಾ ಸಾಹಿತ್ಯ ಮತ್ತು ಸಂಸ್ಕೃತಿ ವೇದಿಕೆ, ಅಕ್ಕನ ಬಳಗ, ಪ್ರೇಮಕ್ಕ ಅಭಿಮಾನಿ ಬಳಗದ ಸಂಯುಕ್ತಾಶ್ರಯದಲ್ಲಿ ನಡೆದ 'ಶ್ರಾವಣ ಸಂಜೆ' ಕಾರ್ಯಕ್ರಮದ ಸಮಾರೋಪ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ತಾಂತ್ರಿಕತೆಯ ಪ್ರಭಾವದ ನಡುವೆಯೂ ನಮ್ಮ ಸಂಪ್ರದಾಯ, ಸಂಸ್ಕೃತಿ,

ಸಂಪಾದಕೀಯ

ಸ್ಪರ್ಧಾತ್ಮಕ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳ ಖರ್ಚು ವೆಚ್ಚ ಭರಿಸಿ

ಕರ್ನಾಟಕದಲ್ಲಿ ಮಾತ್ರವಲ್ಲದೇ ಇಡೀ ದೇಶಾದ್ಯಂತ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನ್ಯಾಯಸಮ್ಮತವಾಗಿ ನಡೆಸಲು ಸರಕಾರಗಳಿಗೆ ಸಾಧ್ಯವಾಗಿಲ್ಲ. ಕೆಎಎಸ್ ಪರೀಕ್ಷೆಯಿಂದ ಹಿಡಿದು ಯುಪಿಎಸ್‌ಸಿ ಪರೀಕ್ಷೆ ವರೆಗೂ ಅನೇಕ ಗೊಂದಲಗಳು ಏರ್ಪಡುತ್ತಲೆ ಇವೆ. ಉದ್ಯೋಗ ಆಕಾಂಕ್ಷಿಗಳೂ ನಿರಾಸೆ ಅನುಭವಿಸುವಂತಾಗಿದೆ.

ಕಳೆದ ನಾಲ್ಕೈದು ವರ್ಷಗಳಲ್ಲಿ ನಡದಂತಹ ಬಹುತೇಕ ಸ್ಪರ್ಧಾತ್ಮಕ ಪರೀಕ್ಷೆಗಳ ಬಗ್ಗೆ ಅಪಸ್ವರ ಕೇಳಿಬಂದಿದೆ. ಪಿಎಸ್‌ಐ ನೇಮಕಾತಿ ಪರೀಕ್ಷೆಯಿಂದ ಆರಂಭವಾದ ಪರೀಕ್ಷಾ ಅಕ್ರಮ ದಂಧೆ ಈಗ ಕೆಎಎಸ್ ಪರೀಕ್ಷೆ ವರೆಗೂ ಬಂದು ನಿಂತಿದೆ. ಇದು ಕೇವಲ ಒಂದೆರಡು ಪರೀಕ್ಷೆಯ ವಿಷಯವಲ್ಲ. ಬಹುತೇಕ ಪರೀಕ್ಷೆಗಳು ನ್ಯಾಯ ಸಮ್ಮತವಾಗಿ, ಪಾರದರ್ಶಕವಾಗಿ ಮತ್ತು ಮುಕ್ತವಾಗಿ ನಡೆಯುತ್ತಿಲ್ಲ ಎನ್ನುವುದಕ್ಕೆ ಸಾಕ್ಷಿಯಾಗಿದೆ.

ಹೀಗೆ ಸ್ಪರ್ಧಾತ್ಮಕ ಪರೀಕ್ಷೆಗಳ ಗೊಂದಲದಿಂದಾಗಿ ಅಭ್ಯರ್ಥಿಗಳು ಪದೇಪದೇ ಗೊಂದಲಕ್ಕೆ ಒಳಗಾಗುತ್ತಿದ್ದಾರೆ. ಪರೀಕ್ಷೆಯಲ್ಲಿ ಉದ್ಭವವಾಗುವ ಒಂದು ಸಣ್ಣ ಕಾರಣದಿಂದ ಪರೀಕ್ಷೆಯನ್ನು ಮತ್ತೊಂದು ಬಾರಿ ನಡೆಸುವುದು ಸರ್ವೆ ಸಾಮಾನ್ಯವಾಗಿದೆ.

ಒಂದು ಪರೀಕ್ಷೆಗೆ ತಯಾರಿ ನಡೆಸಿದ ಅಭ್ಯರ್ಥಿಗಳು ಎರಡೆರಡು ಬಾರಿ ಪರೀಕ್ಷೆ ಎದುರಿಸಬೇಕಾಗಿದೆ. ಪರೀಕ್ಷೆಯ ಖರ್ಚು ವೆಚ್ಚಗಳನ್ನು ಎರಡೆರಡು ಬಾರಿ ಭರಿಸಿ ಉದ್ಯೋಗ ಗಿಟ್ಟಿಸಿಕೊಳ್ಳುವ ಕನಸು ಕಾಣುವಂತಾಗಿದೆ.

ಬಡ ಮತ್ತು ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಒಂದು ಬಾರಿ ಪರೀಕ್ಷೆ ಎದುರಿಸುವ ಖರ್ಚು ವೆಚ್ಚಗಳನ್ನು ಭರಿಸಲೂ ಕಷ್ಟಪಡಬೇಕಾದ ಕಾಲದಲ್ಲಿ ಎರಡು ಬಾರಿ ನಿಭಾಯಿಸುವುದು ಕಷ್ಟ. ಕೇವಲ ಬಡ ಅಭ್ಯರ್ಥಿಗಳಿಗೆ ಮಾತ್ರವಲ್ಲ, ಮಧ್ಯಮ ವರ್ಗದ ಅಭ್ಯರ್ಥಿಗಳು ಎರಡೆರಡು ಬಾರಿ ಪರೀಕ್ಷೆ ಬರೆಯಲು ಸಾವಿರಾರು ರೂಪಾಯಿ ಖರ್ಚು ಮಾಡಬೇಕಾಗಿದೆ. ಹೀಗಾಗಿ ಸರಕಾರ ಮತ್ತೊಮ್ಮೆ ಪರೀಕ್ಷೆ ನಡೆಸುವ ನಿರ್ಧಾರ ಕೈಗೊಂಡರೆ ಆ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳ ಖರ್ಚು ವೆಚ್ಚಗಳನ್ನೂ ಭರಿಸುವಂತಾಗಬೇಕು. ಅಂದಾಗ ಮಾತ್ರ ಬಡ ಮತ್ತು ಪ್ರತಿಭಾವಂತ ಅಭ್ಯರ್ಥಿಗಳಿಗೆ ಒಂದಷ್ಟಾದರೂ ಹೊರೆ ತಗ್ಗಿಸಬಹುದು.

ಸೆಪ್ಟೆಂಬರ್ 5, ಶಿಕ್ಷಕರ ದಿನಾಚರಣೆ ಪ್ರಯುಕ್ತ ಲೇಖನ

ಗುರುವಿಗೊಂದು ಶರಣು

ಗುರು ಎಂದರೆ ಕೇವಲ ವ್ಯಕ್ತಿಯಲ್ಲ, ಅವರೊಂದು ಶಕ್ತಿ, ಅವರೊಂದು ನಂಬಿಕೆ. ಅಜ್ಞಾನದ ಕತ್ತಲೆ ಕಳೆದು ಸುಜ್ಞಾನದೆಡೆಗೆ ಕರೆದುಕೊಂಡು ಹೋಗುವರು ಗುರುಗಳು ನಂಬಿದವರು ಕೈಬಿಟ್ಟಾಗ, ಗುರು ನಮ್ಮ ಕೈಹಿಡಿದು ಮುನ್ನಡೆಸುತ್ತಾನೆ, ಸರಿಯಾದ ಮಾರ್ಗ ತೋರಿಸುತ್ತಾನೆ.

ನಮ್ಮೆಲ್ಲರ ವಿದ್ಯಾರ್ಥಿ ಜೀವನದಲ್ಲಿ ಗುರುಗಳು ಜ್ಞಾನವನ್ನು ನೀಡಿ ಬಾಳಿಗೆ ಬೆಳಕಾಗಿರುತ್ತಾರೆ. ಅದರಲ್ಲೂ ಕೆಲವೊಂದು ಗುರುಗಳು ನಮ್ಮ ಜೀವನವನ್ನು ರೂಪಿಸುವಲ್ಲಿ ತುಂಬಾ ಮಹತ್ವದ ಪಾತ್ರವನ್ನು ವಹಿಸಿರುತ್ತಾರೆ. ನಮ್ಮಗೆ ಸರಿಯಾದ ಮಾರ್ಗ ತೆ-ಋರಿಸಿ ಮುನ್ನಡೆಸುವ ಗುರು ಸಿಕ್ಕರೆ ಜೀವನದಲ್ಲಿ ಅದಕ್ಕಿಂತ ದೊಡ್ಡದಾದ ಅದೃಷ್ಟ ಬೇರೊಂದಿಲ್ಲ.

ಗುರು ಎಂದರೆ ಬರೀ ಪಾಠವನ್ನು ಕಂಠಪಾಠ ಮಾಡಿಸಿ ಹೆಚ್ಚು ಅಂಕ ಗಳಿಸುವ ವ್ಯಕ್ತಿಯನ್ನಾಗಿ ರೂಪಿಸುವದು ಮಾತ್ರವಲ್ಲ, ಜೀವನಕ್ಕೆ ಬೇಕಾಗುವ ಮೌಲ್ಯಯುತ ಪಾಠವನ್ನು ಹೇಳಿಕೊಟ್ಟು ಜೀವನ ನಡೆಸಲು ಮಾರ್ಗ ತೋರಿಸಿದವರೇ ನಮ್ಮ ಪಾಲಿನ ನಿಜವಾದ ಗುರುಗಳಾಗುತ್ತಾರೆ. ಪ್ರತಿವರ್ಷ ಡಾ.ಸರ್ವಪಲ್ಲಿ ರಾಧಾಕೃಷ್ಣನ್‌ರ ಜನ್ಮದಿನದ ನೆನಪಿಗಾಗಿ ಸೆಪ್ಟೆಂಬರ್ 5ರಂದು ಶಿಕ್ಷಕರ ದಿನ ಎಂದು ಆಚರಿಸಲಾಗುತ್ತದೆ.

ನಮಗೆ ಗುರುಗಳೆಂದರೆ ನೆನಪಾಗುವುದು ಡಾ.ಸರ್ವಪಲ್ಲಿ ರಾಧಾಕೃಷ್ಣನ್. ಅವರೇ ಹೇಳಿದಂತೆ, 'ಯಾರು ನಮ್ಮನ್ನು ನಮ್ಮಷ್ಟಕ್ಕೆ ಯೋಚಿಸುವಷ್ಟು ಶಕ್ತರನ್ನಾಗಿಸುವಲ್ಲಿ ಸಹಾಯ ಮಾಡುತ್ತಾರೋ ಅವರೇ ನಿಜವಾದ ಶಿಕ್ಷಕರು'. ಬರಿ ಪಾಠ ಮಾಡಿ ವಿಷಯ ಮುಗಿಸಿದರೆ ಅಷ್ಟು ಸಾಕಾಗದು. ಪಾಠದಲ್ಲಿ ಬರುವ ಮೌಲ್ಯಗಳನ್ನು ಮಕ್ಕಳು ಜೀವನದಲ್ಲಿ ಹೇಗೆ ಅಳವಡಿಸಿಕೊಳ್ಳಬೇಕು ಎಂಬ ತಿಳುವಳಿಕೆ ನೀಡುವುದರೊಂದಿಗೆ ಅವರ ಯೋಚನಾ ಶಕ್ತಿಯನ್ನು ಉತ್ತಮವಾಗಿಸುವುವವನೇ ನಿಜವಾದ ಗುರು ಎನ್ನುತಾರೆ.

ಶಿಕ್ಷಕರ ದಿನಾಚರಣೆ ಬರಿ ಆಚರಣೆ ಆಗಿ ಉಳಿಯಬಾರದು. ನಮಗೆ ಅಕ್ಷರದ ಬೀಜ ಬಿತ್ತಿ, ಜ್ಞಾನ ದಾಹವನ್ನು ನೀಗಿಸಿ ನಮ್ಮನ್ನು ಸರಿಯಾ ದಾರಿಗೆ ತಂದ ಗುರುಗಳಿಗೆ ಗುರುದಕ್ಷಣೆಯಾಗಿ ಅವರಿದ್ದಲ್ಲಿಗೆ ಹೋಗಿ ಗೌರವ ಸರ್ಮರ್ಪಿಸಿದರೆ ಅದು ನಿಜವಾದ ಆಚರಣೆ ಆಗುತ್ತದೆ. ಗುರುಗಳಿಂದ ಜ್ಞಾನ ಪಡೆದ ಮಕ್ಕಳು ನಯ-ವಿನಯದಿಂದ ಸಮಾಜದಲ್ಲಿ ಬಾಳಿದರೆ ಅದುವೇ ಗುರುಗಳಿಗೆ ಶಿಷ್ಯ ಕೊಡುವ ದೊಡ್ಡ ಕಾಣಿಕೆ. ಸಮಾಜದಲ್ಲಿ

ಮನುಷ್ಯ ಏನೇ ತಪ್ಪು ಮಾಡಿದರೂ ಮೊದಲು ಬೈಯುವದು ಶಿಕ್ಷಕನನ್ನು. ಅಕ್ಷರ ಜ್ಞಾನ ನೀಡಿ, ವಿದ್ಯಾ-ಬುದ್ಧಿ ನೀಡಿದ ಗುರುವಿಗೆ ಬೈಯಿಸುವುದು ಎಷ್ಟು ಸರಿ ನೀವೇ ಯೋಚಿಸಿ.

ಒಬ್ಬ ರೈತ ತನ್ನ ತೋಟದಲ್ಲಿ ಸಸಿಯನ್ನು ನೆಟ್ಟು ಪ್ರನಿತ್ಯ ಅದನ್ನು ಪೋಷಣೆ ಮಾಡಿ, ಅದರಿಂದ ಬರುವ ಫಸಲನ್ನು ರಕ್ಷಿಸುತ್ತಾನೋ ಹಾಗೆಯೇ ಆ ಎಲ್ಲ ಗಿಡಗಳಿಗೆ ಯಾವ ರೀತಿ ಕಾಳಜಿ ಮಾಡುತ್ತಾನೋ, ಅದೇ ರೀತಿ ಗುರುಗಳು ತಮ್ಮ ವಿದ್ಯಾರ್ಥಿಗಳನ್ನು ಬೆಳೆಸುತ್ತಾರೆ. ವಿದ್ಯಾರ್ಥಿಗಳ ಮನಸ್ಸನ್ನು ಒಳ್ಳೆಯ ಮಾರ್ಗದಲ್ಲಿ ಹೋಗುವಂತೆ ಮತ್ತು ಸ್ವಚ್ಛ ಹೃದಯಿಗಳನ್ನಾಗಿ ಮಾಡಿತ್ತಾರೆ, ಪ್ರೋತ್ಸಾಹಿಸುತ್ತಾರೆ. ಇಷ್ಟೇ ಅಲ್ಲದೆ ನಮ್ಮಗೆ ಯಾವ ಕ್ಷೇತ್ರದಲ್ಲಿ ಆಸಕ್ತಿ ಇದೆ ಎಂದು ಅರಿತುಕೊಂಡು ಅದೇ ಕ್ಷೇತ್ರದಲ್ಲಿ ಬೆಳೆಯಲು ನಮಗೆ ಸಹಾಯ ಮಾಡುತ್ತಾರೆ. ನಮ್ಮ ಭಾವೀ ಭವಿಷ್ಯ ಉಜ್ವಲವಾಗಬೇಕೆಂದರೆ ಅದಕ್ಕೆ ಗುರುಗಳೇ ಕಾರಣರಾಗಿರುತ್ತಾರೆ.

ಹಿಂದೆ ಗುರುವಿರಲಿ, ಮುಂದೆ ಗುರಿಯಿರಲಿ ಎಂಬ ಒಂದು ಮಾತಿದೆ. ಅದೇ ರೀತಿ ಗುರುಗಳು ಯಾವಾಗಲೂ ನಮಗೆ ಗುರಿ ತೋರಿಸುತ್ತಾರೆ. ನಾವು ಅವರು ತೋರಿಸಿದ ಪಥದಲ್ಲಿ ಮುನ್ನಡೆಯಬೇಕು. ಅಂದಾಗ ಯಶಸ್ಸು ನಮ್ಮದಾಗುವದು. ಪಠ್ಯದ ಜೊತೆಯಲ್ಲಿ ಪಠ್ಯೇತರ ಚಟುವಟಿಕೆಗಳಾದ ಆಟ, ಸಂಗೀತ, ನೃತ್ಯ ಎಲ್ಲವನ್ನು ಕೂಡ ಗುರುಗಳೇ ಕಲಿಸುತ್ತಾರೆ. ಮನೆಯಲ್ಲಿ ನಾವು ತಂದೆ-ತಾಯಿಯರನ್ನು ಯಾವ ರೀತಿ ಪ್ರೀತಿಸುತ್ತೇವೋ, ಗೌರವಿಸುತ್ತೇವೋ ಅದೇ ರೀತಿ ಶಾಲೆಯಲ್ಲಿ ತಿದ್ದಿ ತೀಡಿ ಮಾರ್ಗದರ್ಶನ ಮಾಡಿದ ಗುರುಗಳನ್ನು ಪ್ರೀತಿಸಬೇಕು, ಗೌರವಿಸಬೇಕು. ನಮ್ಮ ಜೀವನದಲ್ಲಿ ನಾವು ಬಹುದೊಡ್ಡ ನಗು, ಸಂತೋಷ ಹಾಗೂ ಸಾಧನೆಯ ಕ್ಷಣವನ್ನು ಕಾಣಬೇಕೆಂದರೆ ಅದಕ್ಕೆ ಕಾರಣೀಕರ್ತರು ಗುರುಗಳೇ ಆಗಿರುತ್ತಾರೆ. ಪ್ರತಿಯೊಬ್ಬ ಗುರುಗಳು ಸಹ ತಮ್ಮ ಶಿಷ್ಯರನ್ನು ಜೀವನದಲ್ಲಿ ಉನ್ನತ ಶಿಖರಕ್ಕೆ ಹೋಗುವಂತೆ ಸಾಧನೆ ಮಾಡಲು ಸ್ಫೂರ್ತಿ ತುಂಬುತ್ತಾರೆ.

ಆದ್ದರಿಂತ ಇಂತಹ ಶಿಕ್ಷಕರ ದಿನಾಚರಣೆ ಅರ್ಥಪೂರ್ಣವಾಗಿ ಆಚರಿಸಿ ಗುರುಗಳ ಕೃಪೆಗೆ ಪಾತ್ರಾಗೋಣ. ಇಂದಿನ ಮಕ್ಕಳಿಗೆ ಗುರುವಿನ ಮಹತ್ವನ್ನು ತಿಳಿಪಡಿಸಬೇಕು. ಗುರು ಎಂದರೆ ಭಯ ಭಕ್ತಿ ಅವರಲ್ಲಿ ಉಂಟಾಗಬೇಕು. ಗುರುಗಳು ಕಂಡರೆ ಗೌರವ ನೀಡುವಂತೆ ಮಾಡಬೇಕು. ಮಕ್ಕಳಲ್ಲಿ ಮೌಲ್ಯಯುತವಾದ ಅಂಶಗಳನ್ನು ತಿಳಿಸಿ ಸರಿಯಾದ ಮಾರ್ಗ ತೋರಿಸಬೇಕು. ಹಾಫಾದಾಗ ಸಮಾಜದಲ್ಲಿ ಅಪರಾಧಗಳು ತಾನಾಗೆ ಕಡಮೆಯಾಗುತ್ತಾ ಹೋಗುತ್ತವೆ. ಇದಕ್ಕೆ ಹೆತ್ತವರ ಸಹಕಾರ, ಮಾರ್ಗದರ್ಶನ ಬಹಳ ಮಹತ್ವದ್ದಾಗಿರುತ್ತದೆ.

ಎರಡು ಕೈ ಸೇರಿದರೆ ತಪ್ಪಾಳೆ ಎನ್ನುವಂತೆ ಗುರುಗಳು, ಹೆತ್ತವರು ಕೂಡಿಕೊಂಡು ಮಕ್ಕಳ ಮುಂದಿನ ಭವಿಷ್ಯವನ್ನು ರೂಪಿಸಿದ್ದಾದರೆ ದೇಶ ರಾಮರಾಜ್ಯವಾಗುವುದರಲ್ಲಿ ಸಂದೇಹವೇ ಇಲ್ಲ. ನಾವೆಲ್ಲಾ ಇಷ್ಟರ ಜ್ಞಾನವಂತರಾಗಿದ್ದೇವೆ ಎಡಿದ ಅಕ್ಷರದ ಭಿಕ್ಷೆ ಕಾರಣ ಎಂದರೆ ತಪ್ಪಾಗಲಾರದು. ಮತ್ತೊಮ್ಮೆ ನನ್ನೆಲ್ಲಾ ಗುರುಗಳಿಗೆ 'ಶಿಕ್ಷಕರ ದಿನಾಚರಣೆ'ಯ ಶುಭಾಶಯಗಳನ್ನು ಕೋರುತ್ತೇನೆ.

– ಎಸ್.ಕೆ. ಆಡಿನ.
ಶಿಕ್ಷಕರು, ಹೊಳೆಆಲೂರ.

ಸೂರ್ಯಕಾಂತಿ ಖರೀದಿ ಕೇಂದ್ರ ಪ್ರಾರಂಭ

■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ತಾಲೂಕಿನ ಕಲಕೇರಿ ಗ್ರಾಮದ ಎಣ್ಣೆ ಸಂಸ್ಕರಣಾ ಸಹಕಾರ ಸಂಘ ಕಲಕೇರಿ ವತಿಯಿಂದ ಕೇಂದ್ರ ಸರಕಾರವು ಬೆಂಬಲ ಬೆಲೆಯ ಎಫ್‌ಎಕ್ಯೂ ಅಡಿ ಸೂರ್ಯಕಾಂತಿ ಖರೀದಿ ಕೇಂದ್ರವನ್ನು ಪ್ರಾರಂಭಿಸಲಾಗಿದ್ದು, ರೈತರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಸಂಘದ ಮುಖ್ಯ ಕಾರ್ಯನಿರ್ವಾಹಕ ರಾಜಾಭಕ್ಷಿ ಹರ್ಲಾಪೂರ ಹೇಳಿದ್ದಾರೆ.

ಸೂರ್ಯಕಾಂತಿ ಬೆಳೆದ ರೈತರು ಆಧಾರ್ ಸಂಖ್ಯೆ, ಉತಾರ (ಪಹಣಿ) ಖಾತೆದಾರರ ಬ್ಯಾಂಕ್ ಪಾಸ್‌ಬುಕ್, ಬಯೋಮೆಟ್ರಿಕ್ ಕಡ್ಡಾಯವಾಗಿ ನೀಡಬೇಕಾಗಿದ್ದು, ಪ್ರತಿ ಎಕರೆಗೆ 3 ಕ್ವಿಂಟಾಲ್ ಪ್ರತಿ ರೈತರಿಂದ ಗರಿಷ್ಠ 15 ಕ್ವಿಂಟಾಲ್ ಖರೀದಿ ಪ್ರಮಾಣ ನಿಗದಿಪಡಿಸಲಾಗಿದೆ.

ಮಾಹಿತಿಗಾಗಿ ಆರ್.ಐ. ಹರ್ಲಾಪೂರ-9591336568, ನನ್ನೆ ಸಾಬ ಖತೀಬ್-9482777636, ಬಸುರಾಜ ಯಲಿಗಾರ-8747474026 ಇವರನ್ನು ಸಂಪರ್ಕಿಸಬಹುದಾಗಿದೆ. ಟಿಎಪಿಎಂಎಸ್ ಮುಂಡರಗಿಯ ಹಳೆ ಎಪಿಎಂಸಿ ಯಾರ್ಡ್‌ನಲ್ಲಿ ನೋಂದಾಯಿಸಿಕೊಂಡು ರೈತರು ಸದುಪಯೋಗವನ್ನು ಪಡೆದುಕೊಳ್ಳಬೇಕೆಂದು ಅವರು ತಿಳಿಸಿದ್ದಾರೆ.

ಗುಡ್ಡಾಪೂರ ದಾನಮ್ಮದೇವಿ ತೊಟ್ಟಿಲೋತ್ಸವ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ದೇವರನ್ನು ಭಕ್ತಿ ಪೂರ್ವಕವಾಗಿ ಪೂಜಿಸಿದಲ್ಲಿ ಮನಸ್ಸಿಗೆ ಶಾಂತಿ-ನೆಮ್ಮದಿ ದೊರಕಲಿದೆ. ಆ ಮೂಲಕ ನೀವು ಕೈಗೊಳ್ಳುವ ಕಾರ್ಯಗಳಲ್ಲಿ ಯಶಸ್ವಿ ದೊರೆಯಲು ಸಾಧ್ಯ ಎಂದು ಮೈಸೂರು ಮಠದ ವಿಜಯಮಹಾಂತ ಸ್ವಾಮೀಜಿ ಹೇಳಿದರು.

ಪಟ್ಟಣದ ಮೈಸೂರು ಮಠದಲ್ಲಿ ವೀರಶೈವ ಲಿಂಗಾಯತ ಸಮಾಜದ ವತಿಯಿಂದ ಶ್ರಾವಣ ಮಾಸದ ನಿಮಿತ್ತ ಗುಡ್ಡಾಪೂರ ದಾನಮ್ಮದೇವಿ ಪುರಾಣ ಕಾರ್ಯಕ್ರಮದಲ್ಲಿ ದಾನಮ್ಮದೇವಿ ತೊಟ್ಟಿಲೋತ್ಸವ ಹಾಗೂ ಉಡಿ ತುಂಬುವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಪುರಾಣ, ಪ್ರವಚನದಲ್ಲಿ ಬರುವ ಸನ್ನಿವೇಶವನ್ನು ಇಂದಿನ ಕಾಲದ ಜನರಿಗೆ ತೋರಿಸುವ ಸಲುವಾಗಿ ಶ್ರೀಮಠದಲ್ಲಿ ಪುರಾಣ ನಡೆಸಲಾಗುತ್ತಿದೆ. ವೀರಶೈವ ಲಿಂಗಾಯತ ಸಮಾಜದವರು

ತೊಟ್ಟಿಲೋತ್ಸವ ಹಾಗೂ ಉಡಿ ತುಂಬುವ ಕಾರ್ಯಕ್ರಮವನ್ನು ಅದ್ದೂರಿಯಾಗಿ ಮಾಡಿರುವುದು ಶ್ಲಾಘನೀಯ ಎಂದರು.

ತೊಟ್ಟಿಲನ್ನು ಕೊಪ್ಪಳ ತಾಲೂಕಿನ ಕಿನ್ಯಾಳ ಗ್ರಾಮದಿಂದ ಸಂಪ್ರದಾಯದಂತೆ ವಿವಿಧ ವಾದ್ಯಗಳೊಂದಿಗೆ ಶ್ರೀಮಠಕ್ಕೆ ತರಲಾಯಿತು. ವೇದಮೂರ್ತಿಗಳಾದ ಮಲ್ಲಯ್ಯಸ್ವಾಮಿ ಗುರುಸ್ಥಳಮಠ, ಗುರಲಿಂಗಯ್ಯ ಹಿರೇಮಠ, ಶಾಂತಯ್ಯ ಶಾಂತಗೇರಿಮಠ ತೊಟ್ಟಿಲೋತ್ಸವ ಕಾರ್ಯಕ್ರಮ ನಡೆಸಿಕೊಟ್ಟರು.

ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷ ಸಿದ್ದಪ್ಪ ಬಂಡಿ, ಪುರಾಣ ಸಮಿತಿ ಅಧ್ಯಕ್ಷ ಟಿ.ಎಸ್. ರಾಜೂರ, ಯುವ ಘಟಕದ ಅಧ್ಯಕ್ಷ ಅಪ್ಪು ಮತ್ತಿಕಟ್ಟಿ, ಎ.ಪಿ. ಗಾಣಿಗೇರ, ಡಾ. ಬಿ.ವ್ಹಿ. ಕಂಬಳ್ಯಾಳ, ಎಸ್.ಎಸ್. ವಾಲಿ, ಪ್ರಭು ಚವಡಿ, ಮಲ್ಲಿಕಾರ್ಜುನ ಹಿರೇಮನಿ, ಶಿವು ಕೋರಧಾನ್ಯಮಠ, ಶರಣಪ್ಪ ರೇವಡಿ, ಮೋಹನ ಕನಕೇರಿ, ಶಿವಪುತ್ರಪ್ಪ ಸಂಕನೂರ, ಬಾಳು ಕುಂಬಾರ, ದೇವಪ್ಪ ಮಡಿವಾಳರ, ಚಿದಾನಂದಪ್ಪ ಹಡಪದ, ಸಂಗಪ್ಪ ಕುಂಬಾರ, ವಿದ್ಯಾ ಬಂಡಿ, ಮಂಜುಳಾ ಕೋರಧಾನ್ಯಮಠ, ಲಲಿತಾ ಗೊಂಗಡಶೆಟ್ಟಿವರ, ಅನ್ನಪೂರ್ಣಾ ಗಾಣಿಗೇರ, ಸುಮಾ ಲಕ್ಕುಂಡಿಮಠ, ಶ್ವೇತಾ ಕಾರಡಗಿಮಠ, ಕಸ್ತೂರೆವ್ಮಾ ಹಿರೇಮಠ, ಪ್ರೇಮಕ್ಕಾ ವಸ್ತ್ರದ ಸೇರಿ ಇತರರು ಇದ್ದರು.

ಆನ್‌ಲೈನ್ ಮುಖಾಂತರ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ 2024-25ನೇ ಸಾಲಿನಲ್ಲಿ ಮೆಟ್ರಿಕ್ ಪೂರ್ವ ಯೋಜನೆಯಡಿ (1 ರಿಂದ 8 ನೇ ತರಗತಿವರೆಗೆ) ವ್ಯಾಸಂಗ ಮಾಡುತ್ತಿರುವ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ ಮತ್ತು ಪಾರ್ಸಿ ವರ್ಗದ ವಿದ್ಯಾರ್ಥಿಗಳು https://ssp.karnataka.gov.in/ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಪ್ರಕ್ರಿಯೆ ಆರಂಭಗೊಂಡಿದ್ದು, ಈ ಮೇಲ್ಕಂಡ ವೆಬ್‌ಸೈಟ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಆನ್‌ಲೈನ್ ಅರ್ಜಿ ಸಲ್ಲಿಸಲು ಕೊನೆಯ ದಿನ ಅಕ್ಟೋಬರ್ 31 ಆಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಆಯಾ ತಾಲೂಕ ಮಾಹಿತಿ ಕೇಂದ್ರಗಳನ್ನು ಹಾಗೂ ಹೆಲ್ಪಲೈನ್ ನಂಬರ: 8277799990 ಸಂಪರ್ಕಿಸಲು ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ ತಿಳಿಸಿದ್ದಾರೆ.

ಸೆ. 10ರಂದು ನೇರ ಸಂದರ್ಶನ

■ ವಿಜಯಸಾಕ್ಷಿ ಸುದ್ದಿ, ಗದಗ

ಅಂಚೆ ಅಧೀಕ್ಷಕರು ಗದಗ ವಿಭಾಗ, ಗದಗರವರು ಅಂಚೆ ಜೀವ ವಿಮೆ ಹಾಗು ಗ್ರಾಮೀಣ ಅಂಚೆ ಜೀವ ವಿಮೆ ಉತ್ಪನ್ನಗಳನ್ನು ಮಾರಾಟ ಮಾಡಲು ನೇರ ಪ್ರತಿನಿಧಿಗಳ ನಿಯುಕ್ತಿಗಾಗಿ ಪ್ರಸ್ತಾಪಿಸಿದ್ದು, ಅರ್ಹ ಅಭ್ಯರ್ಥಿಗಳು ತಮ್ಮ ಇತ್ತೀಚಿನ ಭಾವಚಿತ್ರ ಮತ್ತು ಶೈಕ್ಷಣಿಕ ಪ್ರಮಾಣ ಪತ್ರದ ನಕಲುಗಳೊಂದಿಗೆ ಸೆಪ್ಟೆಂಬರ್ 10ರಂದು ಬೆಳಿಗ್ಗೆ 10.30 ಗಂಟೆಗೆ ಗದಗ ಎಪಿಎಂಸಿ ಯಾರ್ಡ್, ಚೇಂಬರ್ ಆಫ್ ಕಾಮರ್ಸ್ ಎದುರುಗಡೆ ಇರುವ ಅಂಚೆ ಅಧೀಕ್ಷಕರ ಕಾರ್ಯಾಲಯದಲ್ಲಿ ನೇರ ಸಂದರ್ಶನಕ್ಕೆ ಹಾಜರಾಗಬಹುದಾಗಿದೆ. ಅಭ್ಯರ್ಥಿಗಳು ಹತ್ತನೇ ತರಗತಿ ಉತ್ತೀರ್ಣರಾಗಿದ್ದು, ಕಡ್ಡಾಯವಾಗಿ 18 ವರ್ಷ ಮೇಲ್ಪಟ್ಟವರು ಆಗಿರಬೇಕು. ಅಭ್ಯರ್ಥಿಗಳು ಬೇರ ಯಾವುದೇ ವಿಮಾ ಕಂಪನಿ/ ಸಂಸ್ಥೆ/ ಸಂಘಗಳ ಏಜೆಂಟ್ ಆಗಿರಬಾರದು. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ಅಂಚೆ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ.

ರಾಣಿ ಚನ್ನಮ್ಮ ವಿವಿಧೋದ್ದೇಶಗಳ ಸಹಕಾರಿ ಸಂಘ

10ನೇ ವಾರ್ಷಿಕ ಸರ್ವ ಸಧಾರಣ ಸಭೆ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಣಿ ಚನ್ನಮ್ಮ ವಿವಿಧೋದ್ದೇಶಗಳ ಸಹಕಾರಿ ಸಂಘದ 10ನೇ ವಾರ್ಷಿಕ ಸರ್ವಸಾಧಾರಣ ಸಭೆಯು ಜರುಗಿ-ತು. ಬ್ಯಾಂಕಿನ ಅಧೀಕ್ಷ ಮಹೇಶ ಬಿ.ಗದಗಿನ (ಕರಿಬಿಷ್ಠಿ) ಸಭೆಯನ್ನುದ್ದೇಶಿಸಿ ಮಾತನಾಡಿ, ಸಂಸ್ಥೆಯನ್ನು ಎಲ್ಲರೂ ಸೇರಿ ಉನ್ನತ ಮಟ್ಟದಲ್ಲಿ ಬೆಳೆಸೋಣ. ಸಂಘದ ವತಿಯಿಂದ ಸಾರ್ವಜನಿಕರಿಗೆ ಅನುಕೂಲವಾಗುವ ರೀತಿಯಲ್ಲಿ ಸ್ಪಂದಿಸಿ ಅವರಿಗೆ ಅವಶ್ಯವಿದ್ದಲ್ಲಿ ಮಾತ್ರ ಸಾಲವನ್ನು ನೀಡಿ ಸಾಲವನ್ನು ಮರುಪಾವತಿ ಮಾಡಿಸುವಲ್ಲಿ ಸಂಘದ ಸರ್ವ ಸದಸ್ಯರು ಹಾಗೂ ಪದಾಧಿಕಾರಿಗಳು ಸಹಕರಿಸುತ್ತಿರುವುದಕ್ಕೆ ಧನ್ಯವಾದಗಳನ್ನು ಅರ್ಪಿಸಿದರು.

ಸಂಘದ ಉಪಾಧ್ಯಕ್ಷ ಚಂದ್ರಶೇಖರ ಪಿ.ಹುಣಸಿಕಟ್ಟಿ ಸಂಸ್ಥ

ಏಕಗವಾಕ್ಷಿ ಸಮಿತಿಯ ಕರ್ತವ್ಯಗಳ ಕುರಿತು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಮಾಹಿತಿ

ಪರಿಸರ ಸ್ನೇಹಿ ಗಣೇಶ ಹಬ್ಬ ಆಚರಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗೌರಿಗಣೇಶ ಹಬ್ಬವನ್ನು ರಾಜ್ಯದಲ್ಲಿ ಸೆಪ್ಟೆಂಬರ್ 7ರಿಂದ ಸಂಭ್ರಮದಿಂದ ಆಚರಿಲಾಗುತ್ತದೆ. ಪಿ.ಓ.ಪಿ ಗಣೇಶ ಮೂರ್ತಿಗಳನ್ನು ತಯಾರಿಸುವುದನ್ನು, ಮಾರಾಟ ಮಾಡುವುದನ್ನು ಹಾಗೂ ಪ್ರತಿಷ್ಠಾಪಿಸುವುದನ್ನು ನಿರ್ಬಂಧಿಸಿದ್ದು, ಪರಿಸರ ಮಾಲಿನ್ಯಕ್ಕೆ ಅವಕಾಶ ಮಾಡಿಕೊಡದಂತೆ ಪರಿಸರ ಸ್ನೇಹಿ ಗಣೇಶ ಹಬ್ಬ ಆಚರಣೆ ಮಾಡಲು ಮಾರ್ಗಸೂಚಿಗಳನ್ನು ನಿಗದಿಪಡಿಸಲಾಗಿದೆ ಎಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಅವರು ತಿಳಿಸಿದ್ದಾರೆ. ಗದಗ ಜಿಲ್ಲಾ ಮಟ್ಟದಲ್ಲಿ ಇಂಧನ, ನಗರಾಭಿವೃದ್ಧಿ, ಅಗ್ನಿಶಾಮಕ ಮತ್ತು ಪೊಲೀಸ್ ಇಲಾಖೆಗಳ ಮುಖ್ಯಸ್ಥರನ್ನೊಳಗೊಂಡ ಏಕಗವಾಕ್ಷಿ ಸಮಿತಿಯನ್ನು ಗದಗ ಶಹರ ಪೊಲೀಸ್ ಠಾಣೆಯಲ್ಲಿ ಸೆಪ್ಟೆಂಬರ್ 1ರಿಂದ ಸ್ಥಾಪಿಸಲಾಗಿದೆ. ಆರಕ್ಷಕ ಉಪ ಅಧೀಕ್ಷಕರು ಸಮಿತಿಯ ಅಧ್ಯಕ್ಷರಾಗಿದ್ದು, ಗದಗ-ಬೆಟಗೇರಿ ನಗರಸಭೆ ಆಯುಕ್ತರು ಸದಸ್ಯ ಕಾರ್ಯದರ್ಶಿಗಳಾಗಿರುತ್ತಾರೆ. ಜಿಲ್ಲಾ ಅಗ್ನಿ ಶಾಮಕ ಅಧಿಕಾರಿ, ಹೆಸ್ಕಾಂ ಇಲಾಖೆಯ ಕಾರ್ಯನಿರ್ವಾಹಕ ಅಭಿಯಂತರರು, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಪ್ರಾದೇಶಿಕ ಪರಿಸರ ಅಧಿಕಾರಿ ಇವರುಗಳು ಸಮಿತಿಯ ಸದಸ್ಯರಾಗಿರುತ್ತಾರೆ.

ತಮ್ಮ ಅಧೀನದಲ್ಲಿರುವ ಜವಾಬ್ದಾರಿಯುತ ಅಧಿಕಾರಿ/ಸಿಬ್ಬಂದಿಗಳನ್ನು ನೇಮಿಸಿ, ಏಕಗವಾಕ್ಷಿ ಸಮಿತಿ ನಿಗದಿಪಡಿಸಿದ ಕರ್ತವ್ಯ ನಿರ್ವಹಿಸಲು ನಿರ್ದೇಶನ ನೀಡಬೇಕೆಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

ಏಕ ಗವಾಕ್ಷಿ ಸಮಿತಿಯ ಕರ್ತವ್ಯಗಳು: ಸರಕಾರದ ಸುತ್ತೋಲೆಗಳನ್ನು ಅನುಷ್ಠಾನಗೊಳಿಸುವ ಬಗ್ಗೆ ತಮ್ಮ ಅಧೀನ ಅಧಿಕಾರಿ/ಸಿಬ್ಬಂದಿಗಳಿಗೆ ಸೂಕ್ತ ನಿರ್ದೇಶನ ನೀಡುವುದು. ಗಣೇಶ ಪ್ರತಿಷ್ಠಾಪನೆಗೆ ಅಗತ್ಯವಿರುವ ಸ್ಥಳ, ಪೆಂಡಾಲ್, ವಿದ್ಯುತ್ ಸಂಪರ್ಕ ಮುಂತಾದ ಪರವಾನಿಗೆಗಳನ್ನು ನೀಡಲು ಕಂದಾಯ, ಲೋಕೋಪಯೋಗಿ, ಇಂಧನ ಅಗ್ನಿಶಾಮಕ ಮತ್ತು ಪೊಲೀಸ್ ಇಲಾಖೆಗಳು ಹಾಗೂ ಸ್ಥಳೀಯ ಸಂಸ್ಥೆಗಳು ಸಂಯೋಜಿತವಾಗಿ ಗಣೇಶ ವಿಗ್ರಹ ಸ್ಥಾಪನೆಗೆ ಅಗತ್ಯವಿರುವ ಪರವಾನಗಿಯನ್ನು ಏಕಗವಾಕ್ಷಿ ಅಡಿಯಲ್ಲಿ ನೀಡಲು ಸೂಕ್ತ ಕ್ರಮ ವಹಿಸುವುದು. ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳು ಪ್ರತಿ ವಾರ್ಡ್‌ಗಳ ಮಟ್ಟದಲ್ಲಿ ಸಂಬಂಧಿಸಿದ ವಿವಿಧ ಇಲಾಖೆಗಳ ಪ್ರತಿನಿಧಿಗಳನ್ನು ಒಳಗೊಂಡಂತೆ ಏಕಗವಾಕ್ಷಿ ವ್ಯವಸ್ಥೆಯನ್ನು ಸ್ಥಾಪಿಸಿ ಪ್ರಚುರ ಪಡಿಸುವುದು. ಕಾರ್ಯಕ್ರಮದ ಆಯೋಜಕರಿಂದ ನಿಗದಿತ ನಮೂನೆಯಲ್ಲಿ ಮುಂಚಿತವಾಗಿ ಅರ್ಜಿ ಪಡೆಯುವುದು ಹಾಗೂ ಆಯೋಜಕರು ಸಲ್ಲಿಸುವ ಅರ್ಜಿಗಳನ್ನು ಸಂಬಂಧಿಸಿದ ಇಲಾಖೆಗಳು ಜಂಟಿ ತಪಾಸಣೆ ಮಾಡಿ ಮೂರು ದಿನಗಳೊಳಗಾಗಿ ನಿಯಮಾನುಸಾರ ಪರವಾನಿಗೆಯನ್ನು ನೀಡಲು ಕ್ರಮ ವಹಿಸುವುದು. ಪರವಾನಿಗೆ ನೀಡುವ ಮುನ್ನ ಆಯೋಜಕರಿಂದ ಕಾಲಕಾಲಕ್ಕೆ ನ್ಯಾಯಾಲಯದ ನಿರ್ದೇಶನಗಳನ್ನು ಹಾಗೂ ಸರ್ಕಾರದ ವಿವಿಧ ಇಲಾಖೆಗಳಿಂದ ನೀಡಿರುವ ಸೂಚನೆಗಳನ್ನು ಪಾಲಿಸುವ ಬಗ್ಗೆ ಮುಚ್ಚಳಿಕೆಯನ್ನು ಪಡೆಯುವುದು. ಸಾರ್ವಜನಿಕ ಸುರಕ್ಷತೆ ಹಾಗೂ ಪರಿಸರ ಮಾಲಿನ್ಯ ಉಂಟಾಗದ ರೀತಿ ಕಾರ್ಯಕ್ರಮಗಳನ್ನು ಆಯೋಜಿಸುವ ಬಗ್ಗೆ ಆಯೋಜಕರಿಂದ ಖಾತರಿಪಡಿಸಿಕೊಳ್ಳುವುದು, ಅಗತ್ಯವಿರುವ ಕಡೆ ಸಿ.ಸಿ. ಕ್ಯಾಮರಾಗಳನ್ನು ಅಳವಡಿಸುವಂತೆ ಆಯೊಜಕರಿಗೆ ಸೂಚಿಸುವುದು.

ಸಾರ್ವಜನಿಕವಾಗಿ ಇಡಲಾಗುವ ಗಣೇಶ, ವಿಗ್ರಹಗಳನ್ನು ಪ್ರತಿ ಸಮಿತಿಯವರು ಕಡ್ಡಾಯವಾಗಿ ಸ್ಥಳೀಯ ಸಂಸ್ಥೆಗಳು ಮತ್ತು ಪೊಲೀಸ್ ಇಲಾಖೆಯಿಂದ ನಿಬಂಧನೆಗೊಳ್ಳಪಟ್ಟ ಅನುಮತಿಗಳನ್ನು ಪಡೆದ ನಂತರವೇ ಸ್ಥಾಪಿಸುವುದು. ಈ ಅನುಮತಿ ಪತ್ರಗಳನ್ನು ಲೈಸೆನ್ಸ್ ನೀಡುವ ಸಂದರ್ಭಗಳು ಪ್ಲಾಸ್ಟಿಕ್-ಪ್ಲೆಕ್ಸ್ ಮತ್ತಿತರ ವಸ್ತುಗಳ ಬಳಕೆ ನಿಷೇಧಿಸುವುದು ಹಾಗೂ ರಾತ್ರಿ 10ರಿಂದ ಬೆಳಗ್ಗೆ 5 ಗಂಟೆಯ ತನಕ ಧ್ವನಿವರ್ಧಕಗಳ ಬಳಕೆ ನಿಷೇಧಿಸುವುದು. ಗೌರಿ-ಗಣೇಶ ಹಬ್ಬದ ಸಂದರ್ಭದಲ್ಲಿ ಸಾರ್ವಜನಿಕರು ಬಣ್ಣರಹಿತ ಮಣ್ಣಿನ ಗಣೇಶ ಮೂರ್ತಿಗಳೊಂದಿಗೆ ಹಬ್ಬ ಆಚರಿಸಿ, ತದನಂತರ ಸ್ಥಳೀಯ ಸಂಸ್ಥೆಗಳು ನಿಗದಿಪಡಿಸಿದ ಸ್ಥಳದಲ್ಲಿಯೇ ಮೂರ್ತಿಗಳನ್ನು ವಿಸರ್ಜಿಸುವುದನ್ನು ಖಾತ್ರಿಪಡಿಸಿಕೊಳ್ಳುವುದು. ಮಣ್ಣಿನ ಗಣೇಶ ಮೂರ್ತಿಗಳ ವಿಸರ್ಜನೆ ಸಂದರ್ಭದಲ್ಲಿ ಹಸಿ ಕಸ ಪ್ರತ್ಯೇಕಿಸಿ, ಮೂರ್ತಿಗಳೊಂದಿಗೆ ನೀರಿಗೆ ವಿಸರ್ಜಿಸದೇ ಪ್ರತ್ಯೇಕವಾಗಿ ವಿಲೇವಾರಿ ಮಾಡುವುದು.

ವಿಶೇಷವಾಗಿ ಹೈ-ಟೆನ್ಸನ್ ತಂತಿ ಹಾದುಹೋಗಿರುವ ಪ್ರದೇಶದಲ್ಲಿ ಯಾವುದೇ ಕಾರಣಕ್ಕೂ ಗಣೇಶ ಮೂರ್ತಿಯನ್ನು ಸ್ಥಾಪಿಸಲು ಅನುಮತಿ ನಿರ್ಬಂಧಿಸುವುದು. ಉತ್ಸವಕ್ಕೆ ಮುಂಚಿತವಾಗಿ ನಾಗರಿಕ ಸಮಿತಿ, ಮೊಹಲ್ಲಾ ಸಮಿತಿ, ಕಾವಲು ಸಮಿತಿ ಮತ್ತಿತರ ಎಲ್ಲಾ ಸಂಘ-ಸಂಸ್ಥೆಗಳ ಮುಖ್ಯಸ್ಥರನ್ನು ಒಳಗೊಂಡಂತೆ ಕೋಮುಸೌಹಾರ್ದ ಸಭೆಗಳನ್ನು ಆಯೋಜಿಸಲು ಕ್ರಮವಹಿಸುವುದು. ಪಿ.ಓ.ಪಿ ಗಣೇಶ ಮೂರ್ತಿಗಳನ್ನು ಸ್ಥಾಪಿಸಲು ಅವಕಾಶ ನೀಡಬಾರದು. ಸಾರಿಗೆ ಇಲಾಖೆ ಅಧಿಕಾರಿಗಳು ಬೇರೆ ಊರುಗಳಿಂದ ಮತ್ತು ರಾಜ್ಯಗಳಿಂದ ಬರುವ ಪಿಓಪಿ ವಿಗ್ರಹಗಳನ್ನು ತಡೆಗಟ್ಟಲು ಚೆಕ್‌ಪೋಸ್ಟ್ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಬೇಕು ಎಂದು ಜಿಲ್ಲಾಧಿಕಾರಿಗಳು ನಿರ್ದೇಶಿಸಿದ್ದಾರೆ.

ಈರುಳ್ಳಿ ಬೆಳೆಯಲ್ಲಿ ಎಲೆ ಮಚ್ಚೆ ರೋಗ, ಸುರಳಿ ರೋಗ

ಈರುಳ್ಳಿ ರೋಗ ಹತೋಟಿಗೆ ಕ್ರಮಗಳು

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಕಳೆದ ಹಲವಾರು ದಿನಗಳ ಕಾಲ ಬಿದ್ದ ಅಧಿಕ ಮಳೆಯಿಂದ ಈರುಳ್ಳಿ ಬೆಳೆಯಲ್ಲಿ ಎಲೆ ಮಚ್ಚೆ ರೋಗ ಹಾಗೂ ಸುರಳಿ ರೋಗಗಳ ಬಾಧೆ ಕಂಡು ಬಂದಿದೆ. ಎಲೆ ಮಚ್ಚೆ ರೋಗ ಬಾಧಿತ ಗಿಡಗಳಲ್ಲಿ ಎಲೆಗಳ ಮೇಲೆ ಚಿಕ್ಕ ನೀರಿನಿಂದಾವೃತವಾದ ಗುಲಾಬಿ ಬಣ್ಣದ ಚುಕ್ಕೆಗಳು ಕಾಣಿಸಿಕೊಂಡು, ವಾತಾವರಣದಲ್ಲಿ ತೇವಾಂಶ ಇದ್ದಾಗ ನೇರಳೆ ಅಥವಾ ಕಂದು ಬಣ್ಣಕ್ಕೆ ತಿರುಗುತ್ತವೆ. ಬಾಧೆ ತೀವ್ರವಾದಂತೆ ಎಲೆ ಸಂಕುಚಿತಗೊಂಡು ಗಿಡಗಳು ಸಾಯುತ್ತವೆ. ಇದರ ಹತೋಟಿಗಾಗಿ 15 ಮಿ.ಲೀ ಡೈಫೆನ್‌ಕೊನಾಜೋಲ್ 25 ಇ.ಸಿ. ಅಥವಾ 15 ಮಿ.ಲೀ ಹೆಕ್ಸಾಕೋನಾಜೋಲ್ 5 ಇ.ಸಿ. ಔಷಧಿಯನ್ನು ಮತ್ತು 30 ಗ್ರಾಂ ನೀರಿನಲ್ಲಿ ಕರುಗುವ 19:19:19 ಗೊಬ್ಬರವನ್ನು 15 ಲೀ ಸಾಮರ್ಥ್ಯದ ಟಾಕಿಗೆ ಬೆರೆಸಿ ಬೆಳೆಗೆ ಸಿಂಪಡಿಸಬೇಕು.

ಒಂದರಿಂದ ಮೂರು ತಿಂಗಳ ಬೆಳೆಯು ಸುರಳಿ ರೋಗಕ್ಕೆ ಬಹು ಬೇಗನೆ ತುತ್ತಾಗುತ್ತದೆ. ರೋಗದ ಬಾಧೆಗೊಳಗಾದ ಗಿಡವು ಸರಿಯಾಗಿ ಅಭಿವೃದ್ಧಿಯಾಗದೆ. ಎಲೆ ಹಾಗೂ ಕಾಂಡವು ಹಳದಿ ಬಣ್ಣಕ್ಕೆ ತಿರುಗುತ್ತವೆ ಹಾಗೂ ಕಾಂಡದ ಅಸಹಜ ಉದ್ದನೆಯ ಬೆಳವಣಿಗೆಯಾಗಿ ಮುದುಡಿ ತಿರುಗಿದಂತೆ ಕಾಣಿಸುತ್ತದೆ. ತೀವ್ರ ಬಾಧೆಗೊಳಗಾದಾಗ ಗಡ್ಡೆಗಳ ಬೆಳವಣಿಗೆ ಬಹಳಷ್ಟು ಕುಂಠಿತವಾಗಿ ಗಡ್ಡೆಯ ಕೊಳೆಯುವಿಕೆ ಪ್ರಾರಂಭವಾಗುತ್ತದೆ.

ಇದರ ಹತೋಟಿಗಾಗಿ ರೈತರು ಹೊಲದಲ್ಲಿ ನೀರು ನಿಲ್ಲದಂತೆ ನೋಡಿಕೊಳ್ಳಬೇಕು ಹಾಗೂ 15 ಮಿ.ಲೀ ಅಜಾಕ್ಸಿಸ್ಟ್ರಾಬಿನ್+ಟೆಬುಕೊನಾಜೋಲ್ ಶಿಲೀಂದ್ರ ನಾಶಕ, 1 ಗ್ರಾಂ ಬೋರಾನ್ ಮತ್ತು 60 ಗ್ರಾಂ 0:0:50 ನೀರಿನಲ್ಲಿ ಕರಗುವ ಗೊಬ್ಬರಗಳನ್ನು 15 ಲೀ ಸಾಮರ್ಥ್ಯದ ಟಾಕಿಗೆ ಬೆರೆಸಿ ಸಿಂಪಡಿಸಬೇಕು ಅಥವಾ 90 ಗ್ರಾಂ ಟ್ರೈಕೋಡರ್ಮಾ ಹಾರ್ಜಿಯಾನಮ್, 90 ಗ್ರಾಂ ಬ್ಯಾಸಿಲಸ್ ಸಬ್ಟಿಲಸ್ ಮತ್ತು 90 ಗ್ರಾಂ ಸೂಡೋಮೋನಾಸ್ ಫ್ಲೋರೊಸೆನ್ಸ್ ಜೈವಿಕ ಕೀಟನಾಶಕಗಳನ್ನು 15 ಲೀ ಸಾಮರ್ಥ್ಯದ ಟಾಕಿಗೆ ಬೆರೆಸಿ ಸಿಂಪಡಿಸಬೇಕು. ಈ ಶಿಲೀಂಧ್ರನಾಶಕಗಳು ಮೋಡ ಕವಿದ ವಾತವರಣವದಲ್ಲಿ ಉತ್ತಮವಾಗಿ ಕೆಲಸ ಮಾಡುತ್ತವೆ.

ಲಘು ಪೋಷಕಾಂಶಗಳ ನಿರ್ವಹಣೆಗಾಗಿ 45 ಗ್ರಾಂ ಲಘು ಪೋಷಕಾಂಶಗಳ ಮಿಶ್ರಣವಾದ ಅರ್ಕಾ ತರಕಾರಿ ಸ್ಪೇಷಲ್, ಒಂದು ಶ್ಯಾಂಪೂ ಮತ್ತು ಒಂದು ನಿಂಬೆಹಣ್ಣಿನ ರಸವನ್ನು 15 ಲೀ ನೀರಿನೊಂದಿಗೆ ಮಿಶ್ರಣಮಾಡಿ 40, 60 ಮತ್ತು 80 ದಿನಗಳ ಬೆಳೆಗೆ ಸಿಂಪಡಿಸುವುದರಿಂದ ಗುಣಮಟ್ಟದ ಗಡ್ಡೆಗಳನ್ನು ಪಡೆಯಬಹುದು.

ಸೈನ್ಯದಲ್ಲಿ ಸೇವೆ ಸಲ್ಲಿಸುವುದೇ ಹೆಮ್ಮೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಭಾರತೀಯ ಸೇನೆಯಲ್ಲಿ ಕಳೆದ 24 ವರ್ಷಗಳಿಂದ ಯೋಧರಾಗಿ ಸೇವೆ ಸಲ್ಲಿಸಿ ನಿವೃತ್ತರಾದ ಸಮೀಪದ ಮಂಜಲಾಪೂರ ಗ್ರಾಮದ ನಿಸಾರಅಹ್ಮದ್ ಹೊಸಮನಿ ತಾಯ್ನಾಡಿಗೆ ಆಗಮಿಸಿದ ಸಂದರ್ಭದಲ್ಲಿ ಅಖಿಲ ಕರ್ನಾಟಕ ಮಾಜಿ ಸೈನಿಕ ಸಂಘದ ಗದಗ ಜಿಲ್ಲಾ ಹಾಗೂ ತಾಲೂಕ ಘಟಕಗಳ ಪದಾಧಿಕಾರಿಗಳು, ಸದಸ್ಯರು ಹಾಗೂ ಅಭಿಮಾನಿಗಳು ಪಟ್ಟಣದಲ್ಲಿ ಅವರನ್ನು ಸ್ವಾಗತಿಸಿ ಅದ್ದೂರಿ ಮೆರವಣಿಗೆಯನ್ನು ನಡೆಸಿದರು.

ಪಟ್ಟಣದ ಮಾನ್ವಿ ಪೆಟ್ರೋಲ್ ಬಂಕ್‌ನಿಂದ ನಿವೃತ್ತ ಯೋಧನನ್ನು ಸೇರಿದ್ದ ನೂರಾರು ಜನರು ಆತ್ಮೀಯವಾಗಿ ಬರಮಾಡಿಕೊಂಡರು. ನಂತರ ತೆರೆದ ವಾಹನದಲ್ಲಿ ನಿಸಾರ ಅಹ್ಮದ್‌ರನ್ನು ಮೆರವಣಿಗೆಯಲ್ಲಿ ಬಜಾರ ರಸ್ತೆ, ಹಾವಳಿ ಹನುಮಂತದೇವರ ದೇವಸ್ಥಾನ, ದೂದನಾನಾ ದರ್ಗಾ, ಸೋಮೇಶ್ವರ ದೇವಸ್ಥಾನಗಳ ಮೂಲಕ ಹಾಯ್ದು ಮಂಜಲಾಪೂರದ ಅವರ ನಿವಾಸದವರೆಗೆ ಕರೆದೊಯ್ಯಲಾಯಿತು.

ಈ ಸಂದರ್ಭದಲ್ಲಿ ಸಂಘದ ಗದಗ ಜಿಲ್ಲಾಧ್ಯಕ್ಷ ಬಸಲಿಂಗಪ್ಪ ಮುಂಡರಗಿ ಮತ್ತು ಲಕ್ಷ್ಮೇಶ್ವರ ತಾಲೂಕ ಅಧ್ಯಕ್ಷ ಚನ್ನಬಸಪ್ಪ ಹುಡೇದ ಮಾತನಾಡಿ, ಭಾರತದ ಸೇನೆಗೆ ತನ್ನದೆ ಆದ ಗೌರವವಿದೆ. ಇಲ್ಲಿ ಸೇವೆ ಸಲ್ಲಿಸುವ ಅವಕಾಶ ದೊರಕಿದ ಪ್ರತಿಯೊಬ್ಬರೂ ಹೆಮ್ಮೆಯಿಂದ ಸೇವೆ ಮಾಡುತ್ತಾರೆ. ಕಳೆದ 24 ವರ್ಷಗಳಿಂದ ಸೇವೆ ಸಲ್ಲಿಸಿ ನಿವೃತ್ತರಾಗಿ ತಾಯ್ನಾಡಿಗೆ ಆಗಮಿಸಿದ ನಿಸಾರ ಅಹ್ಮದ ಅವರ ಮಾರ್ಗದರ್ಶನ ಮುಂದಿನ ದಿನಗಳಲ್ಲಿ ಯುವ ಸೈನಿಕರಿಗೆ ದೊರೆಯುಂತಾಗಲಿ ಎಂದು ಹೇಳಿದರು.

ನಿವೃತ್ತ ಯೋಧ ನಿಸಾರ ಅಹ್ಮದ ಮಾತನಾಡಿ, ಯೋಧರಿಗೆ ನಮ್ಮಲ್ಲಿರುವ ಗೌರವ ನಿಜಕ್ಕೂ ನಮ್ಮೆಲ್ಲರಿಗೂ ಹೆಮ್ಮೆಯ ಸಂಗತಿಯಾಗಿದ್ದು, ನಿವೃತ್ತರಾಗಿ ಬಂದ ನನಗೆ ನೀಡಿದ ಗೌರವಗಳನ್ನು ನೋಡಿ ಕಣ್ತುಂಬಿ ಬಂದಿದೆ ಎಂದರು.

ಜಿಲ್ಲಾ ಮಟ್ಟದ ಅತ್ಯುತ್ತಮ ಶಿಕ್ಷಕ ಪ್ರಶಸ್ತಿಗೆ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸೆ.5ರಂದು ಶಿಕ್ಷಕರ ದಿನಾಚರಣೆ ಅಂಗವಾಗಿ ಜಿಲ್ಲಾ ಮಟ್ಟದ ಅತ್ಯುತ್ತಮ ಶಿಕ್ಷಕ ಪ್ರಶಸ್ತಿಗಾಗಿ ಪ್ರಾಥಮಿಕ/ ಪ್ರೌಢಶಾಲಾ ವಿಭಾಗಗಳಿಂದ ಜಿಲ್ಲೆಯಿಂದ ಒಟ್ಟು 18 ಪ್ರಸ್ತಾವನೆಗಳನ್ನು ಆಯ್ಕೆ ಮಾಡಲಾಗಿದ್ದು, ಆಯ್ಕೆಯಾದ ಪ್ರಶಸ್ತಿ ಪುರಸ್ಕೃತ ಶಿಕ್ಷಕರ ಮಾಹಿತಿ ಹೀಗಿದೆ.

ಕಿರಿಯ ಪ್ರಾಥಮಿಕ ವಿಭಾಗ: ಪರವಿನಬಾನು ಎಂ.ಹೊಂಬಳ-ಗದಗ ಶಹರದ ಸರಕಾರಿ ಹಿರಿಯ ಪ್ರಾಥಮಿಕ ಉರ್ದು ಗಂಡು ಮಕ್ಕಳ ಶಾಲೆ ನಂ.7 ಗಂಗಿಮಡಿ, ಶೇಖರಪ್ಪ ಬಸಪ್ಪ ವಾಲ್ಮೀಕಿ-ಗದಗ ಗ್ರಾಮೀಣ ಸರಕಾರಿ ಕಿರಿಯ ಪ್ರಾಥಮಿಕ ಶಾಲೆ ಜನತಾ ಕಾಲೋನಿ ಹೊಂಬಳ, ಗೇಮಪ್ಪ ಎಸ್.ಲಮಾಣಿ-ಸರಕಾರಿ ಕಿರಿಯ ಪ್ರಾಥಮಿಕ ಉರ್ದು ಶಾಲೆ ಹಮ್ಮಿಗಿ-ಮುಂಡರಗಿ, ಯಶೋಧಾ ಲ.ಗುಡಿಸಾಗರ-ಸರಕಾರಿ ಕಿರಿಯ ಪ್ರಾಥಮಿಕ ಶಾಲೆ ಗಂಗಾಪುರ-ನರಗುಂದ, ಪ್ರೇಮಕ್ಕ ಎಸ್.ಪಿ.-ಸರಕಾರಿ ಕಿರಿಯ ಪ್ರಾಥಮಿಕ ಶಾಲೆ ದೊಡ್ಡೂರ ತಾಂಡಾ-ಲಕ್ಷ್ಮೇಶ್ವರ, ವಿರುಪಮ್ಮಾ ಸಿ.ಹಿರೇಮಠ-ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಜಿಗಳೂರ-ರೋಣ.

ಹಿರಿಯ ಪ್ರಾಥಮಿಕ ಶಾಲಾ ವಿಭಾಗ: ಐ.ಎಮ್. ರಾಜೇಖಾನ-ಸರಕಾರಿ ಹಿರಿಯ ಪ್ರಾಥಮಿಕ ಕನ್ನಡ ಹೆಣ್ಣು ಮಕ್ಕಳ ಶಾಲೆ ನಂ.5-ಬೆಟಗೇರಿ, ಅನ್ನಪೂರ್ಣ ವ್ಹಿ.ಯಾಳವಾರ-ಬಿ.ಆಯ್.ಇ.ಆರ್.ಟಿ. ಬಿ.ಆರ್.ಸಿ. ಗದಗ ಗ್ರಾಮೀಣ, ಗವಿಸಿದ್ದ ಹನಮರಡ್ಡಿ ರಾಜೂರ-ಉನ್ನತೀಕರಿಸಿದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಜಾಲವಾಡಗಿ-ಮುಂಡರಗಿ, ರಮೇಶ್ ಎಲ್.-ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಕಕ್ಕೂರ-ಮುಂಡರಗಿ, ನಾಗರಾಜ ನಿಂಗಪ್ಪ ಶಿಗ್ಲಿ-ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಹರದಗಟ್ಟಿ-ಲಕ್ಷ್ಮೇಶ್ವರ, ಆಯ್.ಎಸ್. ಹಿರೇಗೌಡ್ರ-ಶರಣಬಸವೇಶ್ವರ ಅನುದಾನಿತ ಕನ್ನಡ ಹಿರಿಯ ಪ್ರಾಥಮಿಕ ಶಾಲೆ ಮೆಣಸಗಿ-ರೋಣ.

ಪ್ರೌಢಶಾಲಾ ವಿಭಾಗ: ಮಹಾಂತವ್ವ ಎ.ಹಿರೇಮಠ-ಸರಕಾರಿ ಪ್ರೌಢಶಾಲೆ ಶಿರುಂಜ-ಗದಗ ಗ್ರಾಮೀಣ, ಹನಮಪ್ಪ ಚನ್ನಪ್ಪ ನಾಯಕ-ಸರಕಾರಿ ಪ್ರೌಢಶಾಲೆ ಜಂತಲಿ ಶಿರೂರ-ಮುಂಡರಗಿ, ಶರಪುನ್ನಿಸಾಬೇಗಂ-ಸರಕಾರಿ ಉರ್ದು ಪ್ರೌಢಶಾಲೆ ಮುಂಡರಗಿ, ಈರಣ್ಣಾ ಮಹಾಂತಪ್ಪ ಹುರಕಡ್ಲಿ-ಎನ್.ಸಿ. ಕೊಳ್ಳಿಯವರ ಸರಕಾರಿ ಪ್ರೌಢಶಾಲೆ ಕಣಕಿಕೊಪ್ಪ-ನರಗುಂದ, ಗೀತಾ ಸು.ನೀಲಗಾರ-ಶ್ರೀ ಶರಣಬಸವೇಶ್ವರ ಪ್ರೌಢಶಾಲೆ ರಾಜೂರ-ರೋಣ, ಪ್ರಕಾಶ ರುದ್ರಪ್ಪ ನಡುವಿನಹಳ್ಳಿ-ಸ.ಚ. ಹರದಗಟ್ಟಿ ಸರಕಾರಿ ಪ್ರೌಢಶಾಲೆ ಘ. ಬಡ್ನಿ-ಲಕ್ಷ್ಮೇಶ್ವರ.

ಕರ್ನಾಟಕ ಮುಸ್ಲಿಂ ಯುನಿಟಿ ಜಿಲ್ಲಾಧ್ಯಕ್ಷರಾದ ಸೈಯದ್ ಖಾಲಿದ್ ಕೊಪ್ಪಳ

ಪವಿತ್ರ ಉಮ್ರಾ ಯಾತ್ರೆಗೆ ವ್ಯವಸ್ಥೆ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಉಚಿತವಾಗಿ ಪವಿತ್ರವಾದ ಉಮ್ರಾ ಯಾತ್ರೆಗೆ ಒಬ್ಬ ಹಫೀಜ್ ಹಾಗೂ ಒಬ್ಬ ಮೌಝಾನ್‌ರವರನ್ನು ಪ್ರತಿ ವರ್ಷಕ್ಕೊಮ್ಮೆ ಕಳಿಸಲಾಗುವುದು. ಅದರ ಜೊತೆಗೆ ಇಬ್ಬರು ಬಡ ವಿದ್ಯಾರ್ಥಿಗಳ 1ನೇ ತರಗತಿಯಿಂದ 10ನೇ ತರಗತಿವರೆಗೆ ವಿದ್ಯಾಭ್ಯಾಸದ ಖರ್ಚನ್ನು ಭರಿಸಲಾಗುವುದೆಂದು ಯುವ ಮುಖಂಡ, ಕರ್ನಾಟಕ ಮುಸ್ಲಿಂ ಯುನಿಟಿಯ ಜಿಲ್ಲಾಧ್ಯಕ್ಷರಾದ ಸೈಯದ್ ಖಾಲಿದ್ ಕೊಪ್ಪಳ ಹೇಳಿದರು.

ಅವರು ಇತ್ತೀಚಿಗೆ ಜರುಗಿದ ಸಭೆಯಲ್ಲಿ ಈ ತೀರ್ಮಾನ ತಗೆದುಕೊಂಡರು. ಇದಕ್ಕೆ ಸಭೆಯಲ್ಲಿದ್ದವರು ಸಹಮತ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಇಬ್ರಾಹಿಂ ಹಳ್ಳಿಕೆರೆ, ಹಲವಾರು ವರ್ಷಗಳಿಂದ ಪ್ರಾಮಾಣಿಕ ಸಾಮಾಜಿಕ ಕಾರ್ಯಗಳನ್ನು ಮಾಡುತ್ತ ಬಂದಿದ್ದ ಸೈಯದ್ ಖಾಲಿದ್ ಕೊಪ್ಪಳರು ಇದೊಂದು ಐತಿಹಾಸಿಕ ನಡೆಯನ್ನು ಸಭೆಯಲ್ಲಿ ತೆಗೆದು-ಕೊಂಡಿದ್ದಾರೆ. ಸಂಘಟನೆಯನ್ನು ಜಿಲ್ಲೆಯಲ್ಲಿ ಸಂಪೂರ್ಣವಾಗಿ ಸಂಘಟಿಸಿ ಅಲ್ಪಸಂಖ್ಯಾತ ರಕ್ಷಣೆ ಹಾಗೂ ಅಲ್ಪಸಂಖ್ಯಾತರ ಅಭಿವೃದ್ಧಿ ಕಾರ್ಯಗಳಿಗಾಗಿ ಶ್ರಮಿಸೋಣ ಎಂದು ಹೇಳಿದರು.

ಈ ಸಂದರ್ಭದಲ್ಲಿ ಅಕ್ಬರ್ ಬೇಗ, ಉಸ್ಮಾನ್ ಮಾಳಿಕೊಪ್ಪ, ಶೌಕತ್ ಕಾತರಕಿ, ಅಲ್ತಾಫ್ ಕಾಗದಗಾರ್, ಅನ್ವರ್ ಬುವಾಜಿ, ಅಶ್ರಫ್ ಸೈಯದ್, ಅಕ್ಬರ್

ಗುಂಡಿ ಮುಚ್ಚೋಕು ಈ ಸರ್ಕಾರಕ್ಕೆ ಯೋಗ್ಯತೆ ಇಲ್ವಾ.?: ಆರ್ ಅಶೋಕ್ ಕಿಡಿ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಗುಂಡಿ ಮುಚ್ಚೋಕು ಈ ಸರ್ಕಾರಕ್ಕೆ ಯೋಗ್ಯತೆ ಇಲ್ವಾ ಎಂದು ಸರ್ಕಾರದ ವಿರುದ್ಧ ವಿಪಕ್ಷ ನಾಯಕ ಆರ್ ಅಶೋಕ್ ಕಿಡಿಕಾರಿದ್ದಾರೆ.

ವಿಧಾನಸೌಧದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಬೆಂಗಳೂರಿನಲ್ಲಿ ರಸ್ತೆ ಮೇಲೆ ಗುಂಡಿ ಬಿದ್ದಿವೆ. ಗುಂಡಿಗಳು ಇರುವುದರಿಂದ ಬಸ್ ಓಡಾಟ ಸರಿಯಾಗಿ ಆಗುತ್ತಿಲ್ಲ. ಗುಂಡಿ ಮುಚ್ಚೋಕು ಈ ಸರ್ಕಾರಕ್ಕೆ ಯೋಗ್ಯತೆ ಇಲ್ವಾ ಎಂದು ಕಿಡಿಕಾರಿದ್ದಾರೆ.

ಲೋಕಾಯುಕ್ತರು ರಸ್ತೆ ಕಸ ನೋಡಿ ಛೀಮಾರಿ ಹಾಕಿದ್ದಾರೆ. ಗುಂಡಿ, ಕಸ ಏನು ಈ ಸರ್ಕಾರಕ್ಕೆ ಕಾಣುತ್ತಿಲ್ಲ. ಎಲ್ಲಾ ಕಡೆ ಪ್ರವಾಹ ಜಾಸ್ತಿ ಆಗಿದೆ. ಅದಕ್ಕೂ ಹಣ ಬಿಡುಗಡೆ ಮಾಡಿಲ್ಲ. ಸಿಎಂ ಎಲ್ಲೂ ಹಣ ಬಿಡುಗಡೆ ಬಗ್ಗೆ ಮಾತಾಡಿಲ್ಲ. ಯಾದಗಿರಿ, ಕಲಬುರಗಿ, ಹಲವು ಭಾಗದಲ್ಲಿ ಅನಾಹುತ ಆಗುತ್ತಿದೆ. ಸರ್ಕಾರ ಏನು ಕ್ರಮ ತೆಗೆದುಕೊಳ್ಳುತ್ತಿಲ್ಲ ಎಂದು ಆರೋಪಿಸಿದರು.

ಜೇಡರ ದಾಸಿಮಯ್ಯ ಶ್ರೇಷ್ಠ ಆದ್ಯ ವಚನಕಾರ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಜೇಡರ ದಾಸಿಮಯ್ಯ ಶ್ರೇಷ್ಠ ಆದ್ಯ ವಚನಕಾರರು ಎಂದು ಸರಕಾರಿ ಹಿರಿಯ ಹೆಣ್ಣು ಮಕ್ಕಳ ಶಾಲೆಯ ಶಿಕ್ಷಕಿ ಶೋಭಾ ಪಾಟೀಲ್ ಹೇಳಿದರು.

ಅವರು ಪಟ್ಟಣದ ಬಾಲಲೀಲಾ ಮಾಹಾಂತ ಶಿವಯೋಗಿಗಳ ಗವಿಮಠದಲ್ಲಿ ಶ್ರಾವಣ ಮಾಸದ ಪ್ರವಚನದಲ್ಲಿ ವಿಶೇಷ ಉಪನ್ಯಾಸ ನೀಡಿ ಮಾತನಾಡಿ, ಜೇಡರ ದಾಸಿಮಯ್ಯ ಕಾಯಕ ಯೋಗಿ, ದಾಸೋಹ, ಧರ್ಮನಿಷ್ಠೆಗಳ ಮೂಲಕ ಸಮಾಜದ ಓರೆಕೋರೆಗಳನ್ನು ತಿದ್ದಲು ತಮ್ಮ ವಚನಗಳ ಮೂಲಕ ಸಮಾಜ ಸುಧಾರಣೆಯಲ್ಲಿ ಪ್ರಮುಖ ಪಾತ್ರ ವಹಿಸಿದವರು. ಸಮಾಜದ ಒಳಿತಿಗಾಗಿ, ದೀನ-ದಲಿತರ ಉದ್ಧಾರಕ್ಕಾಗಿ ಸಮಾಜಕ್ಕೆ ಬೆಳಕಾದವರು. ಪ್ರತಿಯೊಬ್ಬರೂ ಕಾಯಕದಲ್ಲಿ ನಿರತರಾಗಬೇಕು, ಕಾಯಕದಲ್ಲಿ ಭಕ್ತಿ ಮಾರ್ಗದಿಂದ ದುಡಿಯುವ ಮೂಲಕ ಕೈಲಾಸ ಕಾಣಬೇಕು ಎಂದವರು. ಇಂತಹ ಮಹನೀಯರ ವಚನಗಳು ಇಂದಿಗೂ ಸಹಕಾರಿಯಾಗಿವೆ ಎಂದರು.

ಪ್ರವಚನಕಾರ ವೇದಮೂರ್ತಿ ಪಂಚಾಕ್ಷರಯ್ಯ ಮರಿದೇವರಮಠ, ಎಂ.ಡಿ. ಬಟ್ಟೂರ, ರಾಮಣ್ಣಾ ಕಮಾಜಿ ಸೇರಿದಂತೆ ಹಲವಾರು ಗಣ್ಯರು ಇದ್ದರು.

ರಸ್ತೆ ಯೋಜನೆ ಸಾಕಾರಗೊಳಿಸಲು ಮನವಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಬಸಣ್ಣ ಬೆಂಡಿಗೇರಿ ಅವರ ಹೊಲದಿಂದ ಜಂಗಳಕೇರಿ (ಸೂರಣಗಿ)ಯವರೆಗೆ ಇರುವ ರಸ್ತೆ ಹದಗೆಟ್ಟಿದ್ದು, ನಮ್ಮ ಹೊಲ-ನಮ್ಮ ರಸ್ತೆ ಯೋಜನೆಯಲ್ಲಿ ಈ ರಸ್ತೆಯನ್ನು ದುರಸ್ಥಿಗೊಳಿಸುವಂತೆ ಆಗ್ರಹಿಸಿ ಭಾರತೀಯ ಕಿಸಾನ್ ಸಂಘದ ತಾಲೂಕು ಘಟಕದ ವತಿಯಿಂದ ಪಟ್ಟಣದಲ್ಲಿ ಶಾಸಕ ಡಾ.ಚಂದ್ರು ಲಮಾಣಿಯವರಿಗೆ ಮನವಿ ಅರ್ಪಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅಧ್ಯಕ್ಷ ಮಾಲತೇಶ ಪಾಟೀಲ, ಈ ಹೊಲಗಳಿಂದ ಸಂಪರ್ಕ ಕಲ್ಪಿಸುವ ರಸ್ತೆ ನಿರ್ಮಾಣವಾದಲ್ಲಿ ಮುನಿಯನ್ ತಾಂಡಾ, ಉಂಡೆನಹಳ್ಳಿ ಗ್ರಾಮಗಳ ರೈತರ ಹೊಲಗಳಿಗೆ ಸಂಪರ್ಕವು ಹತ್ತಿರವಾಗುತ್ತದೆ. ರೈತರು ಬೆಳೆದ ಬೆಳೆಗಳನ್ನು ತರಲು ಸಹ ಈ ರಸ್ತೆಯಲ್ಲಿ ಅಸಾಧ್ಯವಾಗಿದ್ದು, ಕೂಡಲೇ ರೈತರಿಗೆ ಆಗುತ್ತಿರುವ ತೊಂದರೆಯನ್ನು ತಪ್ಪಿಸಿ ಅನೂಕೂಲ ಮಾಡಿಕೊಡುವಂತೆ ಶಾಸಕರಿಗೆ ಮನವಿ ಅರ್ಪಿಸುವದಾಗಿ ಹೇಳಿದರು. ಮನವಿ ಸ್ವೀಕರಿಸಿದ ಶಾಸಕರು ರೈತರ ಸಮಸ್ಯೆಗಳ ಬಗ್ಗೆ ನಮಗೆ ಅರಿವು ಇದ್ದು, ಸರಕಾರದಿಂದ ಅನುದಾನ ಬಂದ ತಕ್ಷಣ ಈ ಕಾರ್ಯವನ್ನು ಕೈಗೊಳ್ಳುತ್ತೇನೆ ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಭಾರತೀಯ ಕಿಸಾನ್ ಸಂಘದ ತಾಲೂಕಾ ಕಾರ್ಯದರ್ಶಿ ಶಿವಲಿಂಗಪ್ಪ ಕಟಗಿ, ಅಜಯ್ ಕರಿಗೌಡ, ಸೋಮೇಶ್ವರ ಓದಣ್ಣವರ್, ಎಂ.ಯು. ಸಿದ್ದಿ, ಟಾಕಪ್ಪ ಸಾತಪುತೆ, ರಾಮಪ್ಪ ಗೌರಿ ಸೇರಿದಂತೆ ಅನೇಕರಿದ್ದರು.

ಬಿ.ಜಿ. ಅಣ್ಣಿಗೇರಿ ಗುರುಗಳ ಸಂಸದ ಬಸವರಾಜ ಬೊಮ್ಮಾಯಿ ಆಶ್ರಮಕ್ಕೆ ಭೇಟಿ

ಅಣ್ಣಿಗೇರಿ ಆಶ್ರಮಕ್ಕೆ ಆರ್ಥಿಕ ನೆರವು

■ ವಿಜಯಸಾಕ್ಷಿ ಸುದ್ದಿ, ಗದಗ

ಶಿಕ್ಷಣ ಪ್ರೇಮಿ, ತ್ಯಾಗಜೀವಿ ಬಿ.ಜಿ. ಅಣ್ಣಿಗೇರಿ ಅವರು ಶಿಕ್ಷಣ ಕ್ಷೇತ್ರಕ್ಕೆ ಸಲ್ಲಿಸಿದ ಸೇವೆ ಅನುಪಮವಾದದ್ದು. ಮಕ್ಕಳ ಗುಣಾತ್ಮಕ ಶಿಕ್ಷಣಕ್ಕಾಗಿ ಅವರ ಸಾಮಾಜಿಕ ಕಳಕಳಿ ಮೆಚ್ಚುವಂತದ್ದು ಎಂದು ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಅವರು ಮಂಗಳವಾರ ಗದುಗಿನ ಬಿ.ಜಿ. ಅಣ್ಣಿಗೇರಿ ಗುರುಗಳ ಆಶ್ರಮಕ್ಕೆ ಭೇಟಿ ನೀಡಿ ಕೆಲ ಸಮಯ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದ ಪದಾಧಿಕಾರಿಗಳೊಂದಿಗೆ ಔಪಚಾರಿಕವಾಗಿ ಮಾತನಾಡಿದರು.

ಅಣ್ಣಿಗೇರಿ ಅವರು ವಿದ್ಯಾರ್ಥಿಗಳ ಸರ್ವಾಂಗೀಣ ಬೆಳವಣಿಗೆಗೆ ಚಿಂತನೆ ಮಾಡುವ ಮೂಲಕ ಅವರ ಬದುಕು ಸುಂದರವಾಗಿ ರೂಪುಗೊಳ್ಳಲು ತಮ್ಮಿಂದಾದ ಎಲ್ಲ ರೀತಿಯ ಸಹಾಯ ಮಾಡಿದ ತ್ಯಾಗ ಜೀವಿ. ಸರಕಾರದ ಯಾವುದೇ ಅನುದಾನವನ್ನು ಬಯಸದೆ ತಮ್ಮ ವೈಯುಕ್ತಿಕ ಹಣವನ್ನು ಪ್ರತಿಭಾನ್ವಿತ ವಿದ್ಯಾರ್ಥಿಗಳ ಉನ್ನತ ಶಿಕ್ಷಣಕ್ಕೆ ಕೈಲಾದ ಮಟ್ಟಿಗೆ ಸಹಾಯ ಮಾಡಿದ್ದಾರೆ. ಗುರುಕುಲ ಆಶ್ರಮದ ಮಾದರಿಯಲ್ಲಿ ನಡೆಸಿದ್ದು ಇತಿಹಾಸ ಎಂದರು.

ಅವರ ತರುವಾಯ ಆಶ್ರಮದಲ್ಲಿ ಅವರ ಶಿಷ್ಯರು ಮಕ್ಕಳಿಗೆ ಉಚಿತವಾಗಿ ಟ್ಯೂಶನ್ ಹೇಳಿ ತಮ್ಮ

ಗುರುವಿಗೆ ನಮನ ಸಲ್ಲಿಸುವ ಹಾಗೂ ಆ ಮೂಲಕ ಆತ್ಮಸಂತೃಪ್ತಿಯನ್ನು ಕಾಣುವ ಕಾಯಕದಲ್ಲಿ ಯಾವುದೇ ಫಲಾಪೇಕ್ಷೆ ಇಲ್ಲದೆ ಸೇವೆ ಸಲ್ಲಿಸುತ್ತಿರುವದು ನಿಜಕ್ಕೂ ಶ್ಲಾಘನೀಯ ಎಂದರು.

ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದ ಕಾರ್ಯಯೋಜನೆಗಳನ್ನು ತಿಳಿದುಕೊಂಡ ಸಂಸದ ಬೊಮ್ಮಾಯಿ ಅವರು ತಾವೂ ಈ ಕಾರ್ಯಕ್ಕೆ ತಮ್ಮ ತಂದೆಯ ಹೆಸರಿನಲ್ಲಿ ವೈಯುಕ್ತಿಕವಾಗಿ ನೆರವು ನೀಡುವದಾಗಿ ಹೇಳಿದರಲ್ಲದೆ, ಅಣ್ಣಿಗೇರಿ ಗುರುಗಳ ಆಶ್ರಮದ ಅಭಿವೃದ್ಧಿ ಕಾಮಗಾರಿಗೆ ಸಂಸದರ ನಿಧಿಯಿಂದ ಸಹಾಯ ಮಾಡುವ ಭರವಸೆ ನೀಡಿದರು.

ಇದೇ ಸಂದರ್ಭದಲ್ಲಿ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದಿಂದ ಸಂಸದ ಬಸವರಾಜ ಬೊಮ್ಮಾಯಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಪ್ರತಿಷ್ಠಾನದ ಪದಾಧಿಕಾರಿಗಳಾದ ಶಿವಕುಮಾರ ಪಾಟೀಲ, ಶಿವಾನಂದ ಕತ್ತಿ, ಡಾ. ಎಸ್.ಬಿ. ಶೆಟ್ಟರ, ಬಸವರಾಜ ಬಿಂಗಿ, ಸಿದ್ದಣ್ಣ ಕವಲೂರ, ರವಿ ದಂಡಿನ, ತೋಂಟೇಶ ವೀರಲಿಂಗಯ್ಯನಮಠ, ಶಂಕ್ರಪ್ಪ ಅಣ್ಣಿಗೇರಿ, ಡಾ. ಎಸ್.ಡಿ. ಯರಗೇರಿ, ಸುಭಾಶ ಬೆಟದೂರ, ಅನಿಲ ಅಬ್ಬಿಗೇರಿ, ಆಂಜನೇಯ ಕಟಗಿ, ಎಂ.ಬಿ. ಪಾಟೀಲ, ರಫೀಕ್ ಅಬ್ಬಿಗೇರಿ, ಎಂ.ಎಸ್. ಚಿನ್ನೂರ, ಆಶಾ ಶೆಟ್ಟರ ಮುಂತಾದವರಿದ್ದರು.

ಪುಣ್ಯಸ್ಮರಣೆ-ವಾರ್ಷಿಕ ಸಭೆ

ಶಿಕ್ಷಣ ಪ್ರೇಮಿ, ತ್ಯಾಗ ಜೀವಿ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನ ಗದಗ ಸೆ. 5ರಂದು ಮುಂಜಾನೆ 10.30ಕ್ಕೆ ನಗರದ ಕೆ.ಎಚ್. ಪಾಟೀಲ ಸಭಾಂಗಣದಲ್ಲಿ ಬಿ.ಜಿ. ಅಣ್ಣಿಗೇರಿ ಗುರುಗಳ 5ನೇ ಪುಣ್ಯಸ್ಮರಣೆ ಸಮಾರಂಭ ಮತ್ತು ವಾರ್ಷಿಕ ಸರ್ವಸಾಧಾರಣ ಸಭೆಯನ್ನು ಏರ್ಪಡಿಸಿದೆ. ಸಾನ್ನಿಧ್ಯವನ್ನು ಜ.ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ವಹಿಸುವರು. ಮುಖ್ಯ ಅತಿಥಿಗಳಾಗಿ ಸಂಸದ ಬಸವರಾಜ ಬೊಮ್ಮಾಯಿ, ನರಗುಂದ ಶಾಸಕ ಸಿ.ಸಿ. ಪಾಟೀಲ, ಗದಗ ಮಾಜಿ ಶಾಸಕ ಡಿ.ಆರ್. ಪಾಟೀಲ ಹಾಗೂ ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರ ಪಾಟೀಲ ಆಗಮಿಸುವರು ಎಂದು ಪ್ರತಿಷ್ಠಾನದ ಕಾರ್ಯದರ್ಶಿ ಶಿವಾನಂದ ಕತ್ತಿ ತಿಳಿಸಿದ್ದಾರೆ.

ಗಣಿತ ಪ್ರಯೋಗಾಲಯ, ಸಂಶೋಧನಾ ಕೇಂದ್ರವನ್ನು ವೀಕ್ಷಿಸಿದ ಆಯುಕ್ತ ಮಹೇಶ ಪೋತದಾರ

ಗಣಿತ ಕಲಿಕೆಗೆ ಪ್ರಯೋಗಾಲಯ ಸಹಕಾರಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗಣಿತ ಎಂದರೆ ಮಕ್ಕಳ ಮುಖದಲ್ಲಿ ಆತಂಕ ಮೂಡುತ್ತದೆ. ರೂಢಿಗತವೋ ಎಂಬಂತೆ ಬಹುತೇಕ ಮಕ್ಕಳಿಗೆ ಗಣಿತ ಎಂದರೆ ಕಷ್ಟದ ವಿಷಯವೇ ಸರಿ. ಅದಕ್ಕೆ ಪರಿಹಾರವಾಗಿ ಅವ್ವ ಸೇವಾ ಟ್ರಸ್ಟ್ ಸಂಸ್ಥೆಯ ನಿರ್ದೇಶಕರಾದ ಹೇಮಲತಾ ಬಸವರಾಜ ಹೊರಟ್ಟಿಯವರ ಸಹಕಾರದಿಂದ ಗಣಿತ ಪ್ರಯೋಗಾಲಯ ಹಾಗೂ ಸಂಶೋಧನಾ ಕೇಂದ್ರವನ್ನು ನಗರದ ಸಿದ್ಧಲಿಂಗ ನಗರದ ಸರಕಾರಿ ಪ್ರೌಢಶಾಲೆಯಲ್ಲಿ ಸ್ಥಾಪಿಸಿರುವುದು ಶ್ಲಾಘನೀಯ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಹಾಗೂ ನಗರಸಭೆ ಆಯುಕ್ತರಾದ ಮಹೇಶ ಪೋತದಾರ ಅಭಿಪ್ರಾಯಪಟ್ಟರು.

ಅವರು ಸಭಾಪತಿ ಬಸವರಾಜ ಹೊರಟ್ಟಿ ದಂಪತಿಗಳು ದತ್ತು ಪಡೆದ ಸಿದ್ಧಲಿಂಗ ನಗರದ ಸರ್ಕಾರಿ ಪ್ರೌಢಶಾಲೆಯಲ್ಲಿ ಹೇಮಲತಾ ಬಸವರಾಜ ಹೊರಟ್ಟಿಯವರ ಸಹಕಾರದಿಂದ ನಿರ್ಮಾಣಗೊಂಡ ಗಣಿತ ಪ್ರಯೋಗಾಲಯ ಹಾಗೂ ಸಂಶೋಧನಾ ಕೇಂದ್ರವನ್ನು ವೀಕ್ಷಿಸಿ ಮೆಚ್ಚುಗೆ ವ್ಯಕ್ತಪಡಿಸಿ ಮಾತನಾಡಿದರು.

ಈ ಸಂದರ್ಭದಲ್ಲಿ ಡಾ.ಬಸವರಾಜ ಧಾರವಾಡ, ಎಚ್. ಆರ್. ಪೆಟ್ಲೂರ್, ಉಪನ್ಯಾಸಕ ಶಂಕರ ಹಡಗಲಿ, ಪ್ರಭಾರಿ ಮುಖ್ಯೋಪಾಧ್ಯಾಯರಾದ ಜಯಲಕ್ಷ್ಮೀ ಅಣ್ಣಿಗೇರಿ, ಶಿಕ್ಷಕರಾದ ಸುಭಾಸ ನಿಡಸನೂರ, ಎ.ಎಮ್. ಸಂಗನಾಳ, ಶಂಕ್ರಮ್ಮ ಆರ್. ಹಣಮಗೌಡ್ರು, ಎಂ.ಐ. ಶಿವನಗೌಡ್ರು, ಮಂಜುಳಾ ಪಿ.ಸಾಮ್ರಾಣಿ, ಸುಮಂಗಲ ಎಂ.ಪತ್ತಾರ್, ಶೋಭಾ ಎಸ್.ಗಾಳಿ, ರಮೇಶ್ ಬಸರಿ, ಸಾವಿತ್ರಿ ಎ.ಗದ್ದನಕೇರಿ, ಎನ್ ಆರ್. ಶಿರೋಳ್, ಸಬಿಯಾ ಯು.ಕುಷ್ಟಗಿ, ಸಂಜೀವಿನಿ ಕೂಲಗುಡಿ, ಮಂಜುಳಾ ಟಿ, ಪದ್ಮಾ ವಿ.ದಾಸರ್, ಲಕ್ಷ್ಮಮ್ಮ ಮಾಳೋತ್ತರ್ ಮುಂತಾದವರು ಉಪಸ್ಥಿತರಿದ್ದರು.

ಶಶಿಕಲಾ ಬಿ.ಗುಳೇದವರ ಸ್ವಾಗತಿಸಿದರು. ಗಂಗಾ ಎಂ.ಅಳವಂಡಿ ಕಾರ್ಯಕ್ರಮ ನಿರೂಪಿಸಿದರು. ಕಾರ್ಯಕ್ರಮ ಆಯೋಜಕಿ ಶಾರದಾ ಬಾಣದ ಪ್ರಾಸ್ತಾವಿಕವಾಗಿ ಮಾತನಾಡಿ ವಂದಿಸಿದರು.

> ಅತ್ಯಂತ ಸರಳ ಗಣಿತ ಕಲಿಕೆಗೆ ಇಲ್ಲಿಯ ನೂರಾರು ಮಾದರಿಗಳು ವಿದ್ಯಾರ್ಥಿಗಳಿಗೆ ಉಪಯುಕ್ತವಾಗುತ್ತವೆ. ಸರ್ಕಾರಿ ಶಾಲೆಯಲ್ಲಿ ಇಂತಹದೊಂದು ಪ್ರಯೋಗಾಲಯ ಇರುವುದು ಸರ್ಕಾರಿ ಶಾಲೆಯಲ್ಲಿ ಓದಿದ ನನಗೆ ಹೆಮ್ಮೆ ಹಾಗೂ ಅಭಿಮಾನವೆನಿಸುತ್ತದೆ. ಇದರ ಸದುಪಯೋಗವನ್ನು ವಿದ್ಯಾರ್ಥಿಗಳು ಪಡೆಯುವ ಮೂಲಕ ಗಣಿತ ವಿಷಯ ಕಠಿಣವಲ್ಲ, ಅತ್ಯಂತ ಸರಳ ಎಂಬ ಮನೋಭಾವದಿಂದ ಅಧ್ಯಯನ ಮಾಡಿದರೆ ಸುಲಲಲಿತವಾಗಿ ಗಣಿತ ವಿಷಯವನ್ನು ಕಲಿಯಬಹುದು. ಅದಕ್ಕೆ ಪೂರಕವಾಗಿ ಈ ಗಣಿತ ಪ್ರಯೋಗಾಲಯ ವಿದ್ಯಾರ್ಥಿಗಳಿಗೆ ಸಹಕಾರಿಯಾಗಲಿದೆ ಎಂದು ಮಹೇಶ ಪೋತದಾರ ಅಭಿಪ್ರಾಯಪಟ್ಟರು.

ಜೆಡಿಎಸ್ ಸಂಘಟನಾ ಕಾರ್ಯದರ್ಶಿಯಾಗಿ ನೇಮಕ

■ ವಿಜಯಸಾಕ್ಷಿ ಸುದ್ದಿ, ಗದಗ

ಜೆಡಿಎಸ್ ಗದಗ ಜಿಲ್ಲಾ ಕಾರ್ಯಾಲಯದಲ್ಲಿ ನಡೆದ ಜಿಲ್ಲಾಮಟ್ಟದ ಸಭೆಯಲ್ಲಿ ಪಕ್ಷದ ಹಿರಿಯರು ಹಾಗೂ ನ್ಯಾಯವಾದಿಗಳಾದ ಕಾಸೀಮಸಾಬ ಫಕೀರಸಾಬ ದೊಡ್ಡಮನಿ ಇವರನ್ನು ಗದಗ ಜಿಲ್ಲಾ ಸಂಘಟನಾ ಕಾರ್ಯದರ್ಶಿಯಾಗಿ ನೇಮಕ ಮಾಡಿ ಜೆಡಿಎಸ್ ಪಕ್ಷದ ಗದಗ ಜಿಲ್ಲಾ ಅಧ್ಯಕ್ಷರಾದ ಎಂ.ವೈ. ಮುಧೋಳ ಇವರು ಆದೇಶ ಪ್ರತಿಯನ್ನು ವಿತರಿಸಿ, ಜಿಲ್ಲಾ ಸಭೆಯಲ್ಲಿ ಜವಾಬ್ದಾರಿಯನ್ನು ವಹಿಸಿಕೊಡಲಾಯಿತು.

'ವಿದ್ಯಾರ್ಥಿಗಳ ಬದುಕಿಗೆ ವಚನಗಳು ದಾರಿದೀಪ' ವಿಷಯದ ಕುರಿತು ಉಪನ್ಯಾಸ

ವಿದ್ಯಾರ್ಥಿಗಳಿಗೆ ಮೌಲ್ಯಯುತ ಶಿಕ್ಷಣ ಅವಶ್ಯ

■ ವಿಜಯಸಾಕ್ಷಿ ಸುದ್ದಿ, ಗದಗ

12ನೇ ಶತಮಾನದಲ್ಲಿ ಶರಣರು ಅನುಭವ ಮಂಟಪವನ್ನು ನಿರ್ಮಿಸಿ, ಎಲ್ಲರೂ ಸೇರಿ ವಿಚಾರಗಳ ವಿನಿಮಯ ಮಾಡಿಕೊಳ್ಳುತ್ತಿದ್ದರು. ಹಾಗೆಯೇ ವಿದ್ಯಾರ್ಥಿಗಳು ಕೂಡ ವಿಚಾರ ವಿನಿಮಯ ಮಾಡುವುದರಿಂದ ಸಮಸ್ಯೆಗಳು ನಿಮ್ಮಲ್ಲಿ ಉದ್ಭವಿಸುವುದಿಲ್ಲ. ಆತ್ಮಹತ್ಯೆಯಂತ ವಿಚಾರಗಳು ಮನಸ್ಸಿನಲ್ಲಿ ಸುಳಿಯುವುದಿಲ್ಲ. ಒಬ್ಬ ವಿದ್ಯಾರ್ಥಿಗೆ ಬೇಕಾಗಿದ್ದು, ದೃಢ ಮನಸ್ಸು ಎಂದು ಡಾ. ಸುಜಾತಾ ಎಸ್.ಬರದೂರ ಹೇಳಿದರು.

ಅವರು ಶ್ರಾವಣ ಮಾಸದ ಪ್ರಯುಕ್ತ ಜಿಲ್ಲಾ ಮತ್ತು ತಾಲೂಕಾ ಕದಳಿ ಮಹಿಳಾ ವೇದಿಕೆ ವತಿಯಿಂದ ಪಿ.ಯು.ಸಿ. ವಿದ್ಯಾರ್ಥಿಗಳಿಗಾಗಿ ಆಯೋಜಿಸಲಾಗಿದ್ದ 'ವಿದ್ಯಾರ್ಥಿಗಳ ಬದುಕಿಗೆ ವಚನಗಳು ದಾರಿದೀಪ' ಎಂಬ ವಿಷಯದ ಕುರಿತು ಆರ್ಯಭಟ ಪದವಿಪೂರ್ವ ವಿಜ್ಞಾನ ಮತ್ತು ವಾಣಿಜ್ಯ ಕಾಲೇಜಿನಲ್ಲಿ ಉಪನ್ಯಾಸ ಮಾಡಿದರು.

ಉದ್ಘಾಟಕರಾಗಿ ಆಗಮಿಸಿದ ತಾಲೂಕಾ ಕದಳಿ ಮಹಿಳಾ ವೇದಿಕೆ ಗೌರವಾಧ್ಯಕ್ಷರಾದ ರತ್ನಕ್ಕ ಪಾಟೀಲ ಮಾತನಾಡುತ್ತ, ಶರಣರ ವಚನಗಳನ್ನು ನಿಮ್ಮ ಜೀವನದಲ್ಲಿ ಅಳವಡಿಸಿಕೊಂಡಿರಾದರೆ ನಿಮ್ಮ ವಿದ್ಯಾರ್ಥಿ ಜೀವನಕ್ಕಷ್ಟೇ ಅಲ್ಲ, ನಿಮ್ಮ ಬಾಳು ಬಂಗಾರವಾಗುತ್ತದೆ ಎಂದರು.

ಅಧ್ಯಕ್ಷತೆಯನ್ನು ವಹಿಸಿದ್ದ ತಾಲೂಕಾ ಕದಳಿ ಮಹಿಳಾ ವೇದಿಕೆಯ ಅಧ್ಯಕ್ಷರಾದ ಸುಲೋಚನಾ ಎಮ್.ಐಹೊಳ್ಳಿಯವರು ಮಾತನಾಡಿ, ಕೇವಲ ಶಿಕ್ಷಣ-ಪದವಿಯಿಂದ ಮಾತ್ರ ಸುಂದರ ಬದುಕನ್ನು ಕಟ್ಟಿಕೊಳ್ಳಲು ಸಾಧ್ಯವಿಲ್ಲ. ಸಂಸ್ಕಾರಯುತ ಶಿಕ್ಷಣದಿಂದ ಉತ್ತಮ ಬದುಕನ್ನು ಕಟ್ಟಿಕೊಳ್ಳಲು ಸಾಧ್ಯ. ಶಿಕ್ಷಣ ಪದವಿಗಳು ಭವಿಷ್ಯದ ಬದುಕಿನಲ್ಲಿ ಆಸರೆ ಮಾತ್ರ. ಆದರೆ ಸಂತೃಪ್ತ ಜೀವನ ನಡೆಸಲು ವಚನಗಳು ದಾರಿ ದೀಪವಾಗಿವೆ ಎಂದರು.

ರೇಣುಕಾ ಕುರುಗೋಡ ನಿರೂಪಣೆ ಮಾಡಿ, ಕೊನೆಗೆ ವಂದಿಸಿದರು. ಕಾರ್ಯಕ್ರಮದಲ್ಲಿ ಲಕ್ಷ್ಮೀ ದೊಡ್ಡಮನಿ ಹಾಗೂ ಸಿಬ್ಬಂದಿ ವರ್ಗದವರು ಪಾಲ್ಗೊಂಡಿದ್ದರು.

> ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಆರ್ಯಭಟ ಪದವಿಪೂರ್ವ ವಿಜ್ಞಾನ ಮತ್ತು ವಾಣಿಜ್ಯ ಕಾಲೇಜು ಪ್ರಾಚಾರ್ಯ ಪ್ರಶಾಂತ ದೊಡ್ಡಮನಿ ಮಾತನಾಡುತ್ತ, ವಿದ್ಯಾರ್ಥಿಗಳ ಜೀವನಕ್ಕೆ ಮೌಲ್ಯಗಳನ್ನು ಕಟ್ಟಿಕೊಡುವಂತ ಶಕ್ತಿ ವಚನ ಸಾಹಿತ್ಯದಲ್ಲಿದೆ. ವಿದ್ಯಾರ್ಥಿಗಳು ಸಂಸ್ಕಾರಯುತ ಜೀವನವನ್ನು ನಡೆಸಬೇಕಾದರೆ ಬಸವಾದಿ ಶರಣರ ವಚನಗಳು ನಿಮ್ಮ ಬದು-ಕಿಗೆ ದಾರಿದೀಪವಾಗುತ್ತವೆ. ಕದಳಿ ಮಹಿಳಾ ವೇದಿಕೆಯಿಂದ ಶಾಲಾ-ಕಾಲೇಜುಗಳಲ್ಲಿ ಶ್ರಾವಣ ಮಾಸದಲ್ಲಿ ಉಪನ್ಯಾಸ ಕಾರ್ಯಕ್ರಮಗಳನ್ನು ಆಯೋಜಿಸುತ್ತಿರುವದು ಶ್ಲಾಘನೀಯ ಕಾರ್ಯವಾಗಿದೆ. ಇದರಿಂದ ವಿದ್ಯಾರ್ಥಿಗಳಿಗೆ ವಚನಗಳ ಮಹತ್ವ ಅರಿವಾಗುವುದು ಎಂದು ಹೇಳಿದರು.

ಕ್ರೀಡಾಕೂಟದಲ್ಲಿ ಜಿಲ್ಲಾ ಮಟ್ಟಕ್ಕೆ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಪದವಿಪೂರ್ವ ಶಿಕ್ಷಣ ಇಲಾಖೆ ಹಾಗೂ ಜ್ಞಾನ ಗಂಗೋತ್ರಿ ಪದವಿಪೂರ್ವ ಕಾಲೇಜು ಪಾಪನಾಶಿ ಇವುಗಳ ಸಂಯುಕ್ತ ಆಶ್ರಯದಲ್ಲಿ ಗದಗ ತಾಲೂಕು ಮಟ್ಟದ ವೈಯಕ್ತಿಕ ಹಾಗೂ ಗುಂಪು ಕ್ರೀಡಾಕೂಟಗಳನ್ನು ಆಯೋಜಿಸಲಾಗಿತ್ತು.

ಈ ಕ್ರೀಡಾಕೂಟಗಳಲ್ಲಿ ಹುಲಕೋಟಿ